Volume : 9 | Issue : 160 | September : 10 : 2026 : Thursday
ಸಂಪುಟ : 9 | ಸಂಚಿಕೆ : 160 | ಸೆಪ್ಟೆಂಬರ್ : 10 : 2026 : ಗುರುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481



ಮುಂಬೈನಲ್ಲಿ ಮಳಿಗೆಯೊಂದಕ್ಕೆ ತೆರಳುತ್ತಿದ್ದ ವೇಳೆ ಅತೀ ಹತ್ತಿರಕ್ಕೆ ಬಂದ ಛಾಯಾಗ್ರಾಹಕರ ಕ್ಯಾಮೆರಾವನ್ನು ಪಕ್ಕಕ್ಕೆ ತಳ್ಳಿದ ನಟಿ ತಾರಾ ಸುತಾರಿಯಾ. ಘಟನೆಗೆ ಸಂಬಂಧಿಸಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ನಟಿಯ ಖಾಸಗಿತನಕ್ಕೆ ಗೌರವ ನೀಡದ ಪಾಪರಾಜಿಗಳ ವಿರುದ್ಧ ನೆಟ್ಟಿಗರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸತೀಶ್ ಜಾರಕಿಹೊಳಿ ವಿರುದ್ಧದ ಇಡಿ ದಾಳಿ ರಾಜಕೀಯ ಪ್ರೇರಿತ: ಡಿ.ಕೆ.ಶಿ | ಪುಟ 2

ಮೋದಿ ಜನಸೇವೆಗೆ 25 ವರ್ಷ: ಸೇವಾ ಅಭಿಯಾನ | ಪುಟ 3

■ ಸುದ್ದಿ ಚುಟುಕು

## ಕುರ್ಚಿ ವಿಚಾರಕ್ಕೆ ಜಗಳ; ವಿದ್ಯಾರ್ಥಿನಿಗೆ ಥಳಿತ

● ವಿಕ್ರಮ ವಾಹಿನಿ । ಕೆಜಿಎಫ್

ನಗರದ ಮಹಾವೀರ್ ಜೈನ್ ಕಾಲೇಜಿನಲ್ಲಿ ಕುರ್ಚಿ ವಿಚಾರಕ್ಕೆ ವಿದ್ಯಾರ್ಥಿಗಳ ನಡುವೆ ನಡೆದ ವಾಗ್ವಾದ ಹಿಂಸಾಚಾರಕ್ಕೆ ತಿರುಗಿದ್ದು, ವಿದ್ಯಾರ್ಥಿನಿಯೊಬ್ಬಳ ಮೇಲೆ ಸಹಪಾಠಿ ಹಲ್ಲೆ ನಡೆಸಿದ ಘಟನೆ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ತರಗತಿಯಲ್ಲಿ ಕುರ್ಚಿಯನ್ನು ಮುಂದಕ್ಕೆ ಸರಿಸುವ ವಿಚಾರಕ್ಕೆ ವಿದ್ಯಾರ್ಥಿಗಳ ನಡುವೆ ವಾಗ್ವಾದ ಆರಂಭವಾಗಿತ್ತು. ಈ ವೇಳೆ ಕೆಲ ವಿದ್ಯಾರ್ಥಿಗಳು ವಿದ್ಯಾರ್ಥಿನಿಯನ್ನು ಅಪಹಾಸ್ಯ ಮಾಡಿದ್ದರಿಂದ ಆಕೆ ಒಬ್ಬ ವಿದ್ಯಾರ್ಥಿಗೆ ಕಪಾಳಮೋಕ್ಷ ಮಾಡಿದ್ದಾಳೆ ಎನ್ನಲಾಗಿದೆ. ಇದರಿಂದ ಆಕ್ರೋಶಗೊಂಡ ಮತ್ತೊಬ್ಬ ವಿದ್ಯಾರ್ಥಿ ಆಕೆಗೆ ಹಲವು ಬಾರಿ ಹೊಡೆದಿದ್ದು, ತೀವ್ರ ಹೊಡೆತಕ್ಕೆ ವಿದ್ಯಾರ್ಥಿನಿ ಪ್ರಜ್ಞೆ ತಪ್ಪಿ ನೆಲಕ್ಕೆ ಕುಸಿದು ಬಿದ್ದಿದ್ದಾಳೆ.

ತಕ್ಷಣ ಇತರ ವಿದ್ಯಾರ್ಥಿಗಳು ಮಧ್ಯಪ್ರವೇಶಿಸಿ ಆಕೆಯ ನೆರವಿಗೆ ಧಾವಿಸಿದ್ದು, ಚಿಕಿತ್ಸೆಗಾಗಿ ಕೆಜಿಎಫ್ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಘಟನೆ ಕುರಿತು ದೂರು ಸ್ವೀಕರಿಸಿರುವ ರಾಬರ್ಟ್‌ಸನ್‌ಪೇಟೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಕಾಲೇಜಿನ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದ್ದು, ಘಟನೆಯಲ್ಲಿ ಭಾಗಿಯಾಗಿರುವ ವಿದ್ಯಾರ್ಥಿಗಳ ಕುರಿತು ಮಾಹಿತಿ ಸಂಗ್ರಹಿಸಲಾಗುತ್ತಿದೆ.

## ಮೂರನೇ ದಿನವೂ ಷೇರುಪೇಟೆ ಕುಸಿತ

● ವಿಕ್ರಮ ವಾಹಿನಿ । ಮುಂಬೈ

ಪಶ್ಚಿಮ ಏಷ್ಯಾದ ಸಂಘರ್ಷದಿಂದ ಕಚ್ಚಾ ತೈಲ ಬೆಲೆ ಏರಿಕೆ ಹಾಗೂ ಐಟಿ ಷೇರುಗಳಲ್ಲಿನ ಮಾರಾಟದ ಒತ್ತಡದ ನಡುವೆ ಭಾರತೀಯ ಷೇರುಪೇಟೆ ಸತತ ಮೂರನೇ ದಿನವೂ ಕುಸಿತ ಕಂಡಿದೆ. ಬುಧವಾರದ ವಹಿವಾಟಿನಲ್ಲಿ ಸೆನ್ಸೆಕ್ಸ್ 813 ಅಂಕಗಳಿಗೂ, ನಿಫ್ಟಿ 203 ಅಂಕಗಳಿಗೂ ಹೆಚ್ಚು ಕುಸಿದಿದೆ.

ದಿನದ ಅಂತ್ಯಕ್ಕೆ 30 ಷೇರುಗಳ ಬಿಎಸ್‌ಇ ಸೆನ್ಸೆಕ್ಸ್ 813.35 ಅಂಕ (1.08%) ಕುಸಿದು 74,764.23ರಲ್ಲಿ ಸ್ಥಿರಗೊಂಡರೆ, ಎನ್‌ಎಸ್‌ಇ ನಿಫ್ಟಿ 203.60 ಅಂಕ (0.86%) ಇಳಿದು 23,431.50ಕ್ಕೆ ತಲುಪಿತು.

ಐಟಿ ವಲಯದ ಷೇರುಗಳಲ್ಲಿ ಭಾರಿ ಮಾರಾಟ ಕಂಡುಬಂದಿದ್ದು, ಎಚ್‌ಸಿಎಲ್ ಟೆಕ್ ಶೇ.4.55ರಷ್ಟು ಕುಸಿತ ದಾಖಲಿಸಿತು. ಇನ್ಫೋಸಿಸ್, ಟೆಕ್ ಮಹೀಂದ್ರಾ, ಟಿಸಿಎಸ್, ಎಚ್‌ಡಿಎಫ್‌ಸಿ ಬ್ಯಾಂಕ್ ಹಾಗೂ ಹಿಂದೂಸ್ತಾನ್ ಯೂನಿಲಿವರ್ ಷೇರುಗಳೂ ನಷ್ಟ ಅನುಭವಿಸಿದವು. ಮತ್ತೊಂದೆಡೆ ಅದಾನಿ ಪೋರ್ಟ್ಸ್, ಟಾಟಾ ಸ್ಟೀಲ್, ಟ್ರೆಂಟ್ ಮತ್ತು ಎನ್‌ಟಿಪಿಸಿ ಷೇರುಗಳು ಏರಿಕೆ ಕಂಡವು.

ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯಿಂದ ಜಾಗತಿಕ ತೈಲ ಬೆಲೆ ಏರಿಕೆಯಾಗಿದ್ದು, ಬ್ರೆಂಟ್ ಕಚ್ಚಾ ತೈಲದ ಬೆಲೆ ಶೇ.2.67ರಷ್ಟು ಹೆಚ್ಚಾಗಿ ಬ್ಯಾರಲ್‌ಗೆ 100.5 ಡಾಲರ್‌ಗೆ ತಲುಪಿದೆ.

ತೈಲ ಬೆಲೆ ಏರಿಕೆ, ಭೌಗೋಳಿಕ ರಾಜಕೀಯ ಅನಿಶ್ಚಿತತೆ ಹಾಗೂ ನಿರಂತರ ಮಾರಾಟದ ಒತ್ತಡ ಹೂಡಿಕೆದಾರರ ವಿಶ್ವಾಸದ ಮೇಲೆ ಪರಿಣಾಮ ಬೀರಿದೆ.

ಇಂಡಿಯಾ ಗಿಖಫಿ ಶೇ.6ಕ್ಕೂ ಹೆಚ್ಚು ಏರಿಕೆಯಾಗಿದ್ದು, ಮಾರುಕಟ್ಟೆಯಲ್ಲಿನ ಏರಿಳಿತ ಹೆಚ್ಚಿರುವುದನ್ನು ಸೂಚಿಸಿದೆ. ವಿದೇಶಿ ಸಾಂಸ್ಥಿಕ ಹೂಡಿಕೆದಾರರು ಮಂಗಳವಾರ 123.19 ಕೋಟಿ ಮೌಲ್ಯದ ಷೇರುಗಳನ್ನು ಮಾರಾಟ ಮಾಡಿದ್ದಾರೆ.

## 8 ತಿಂಗಳ ಬಳಿಕ ವಿದ್ಯಾರ್ಥಿನಿಯರ ಪತ್ತೆ

● ವಿಕ್ರಮ ವಾಹಿನಿ । ಬೆಂಗಳೂರು

ಎಂಟು ತಿಂಗಳ ಹಿಂದೆ ನಾಪತ್ತೆಯಾಗಿದ್ದ ಇಬ್ಬರು ಕಾಲೇಜು ವಿದ್ಯಾರ್ಥಿನಿಯರನ್ನು ಸಿಐಡಿ ಪೊಲೀಸರು ಪತ್ತೆಹಚ್ಚಿದ್ದಾರೆ. ಜನವರಿ 31ರಂದು ವಿದ್ಯಾರಣ್ಯಪುರದಿಂದ ನಾಪತ್ತೆಯಾಗಿದ್ದ ವಿದ್ಯಾರ್ಥಿನಿಯರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಲು ಪೊಲೀಸರು ಸಿದ್ಧತೆ ನಡೆಸಿದ್ದಾರೆ.

ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿದ್ದ ಇಬ್ಬರು ವಿದ್ಯಾರ್ಥಿನಿಯರು ನಾಪತ್ತೆಯಾದ ಕುರಿತು ಪೋಷಕರ ದೂರಿನ ಮೇರೆಗೆ ವಿದ್ಯಾರಣ್ಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಹಲವು ತಿಂಗಳಾದರೂ ಪತ್ತೆಯಾಗದ ಹಿನ್ನೆಲೆಯಲ್ಲಿ ವಿದ್ಯಾರ್ಥಿನಿಯೊಬ್ಬರ ಕುಟುಂಬ ಹೈಕೋರ್ಟ್ ಮೊರೆ ಹೋಗಿತ್ತು. ಬಳಿಕ ಪ್ರಕರಣವನ್ನು ಸಿಐಡಿಗೆ ವರ್ಗಾಯಿಸುವಂತೆ ಹೈಕೋರ್ಟ್ ನಿರ್ದೇಶಿಸಿತ್ತು. 3ನೇ ಪುಟಕ್ಕೆ...

# ಸತೀಶ್ ಜಾರಕಿಹೊಳಿ ಮೇಲೆ ಇಡಿ ಈಟಿ

● ವಿಕ್ರಮ ವಾಹಿನಿ । ಬೆಂಗಳೂರು

ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆಯಡಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಸೇರಿದ 18ಕ್ಕೂ ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ಇಂದು ಮುಂಜಾನೆಯಿಂದ ಏಕಕಾಲದಲ್ಲಿ ಹಠಾತ್ ದಾಳಿ ನಡೆಸಿದ್ದಾರೆ.

ಸತೀಶ್ ಜಾರಕಿಹೊಳಿ ಅವರಿಗೆ ಸೇರಿದ ಬೆಂಗಳೂರು, ಬೆಳಗಾವಿ, ಮಹಾರಾಷ್ಟ್ರ ಸೇರಿ 18 ಕಡೆಗಳಲ್ಲಿ ದಾಳಿ ನಡೆಸಿರುವ ಇಡಿ ಅಧಿಕಾರಿಗಳು ಶೋಧ ಕೈಗೊಂಡಿದ್ದಾರೆ.

ನಗರದ ಡಾಲರ್ಸ್ ಕಾಲೋನಿಯ ನಿವಾಸ, ಸರ್ಕಾರಿ ನಿವಾಸ, ಬೆಳಗಾವಿಯ ನಿವಾಸದ ಮೇಲೆ ಇಡಿ ಅಧಿಕಾರಿಗಳ ತಂಡಗಳು ಮುಂಜಾನೆಯಿಂದ ನಡೆಸಿರುವ ದಾಳಿಯು ಮಧ್ಯಾಹ್ನದವರೆಗೆ ಮುಂದುವರೆಸಿ ದಾಖಲೆ ಪತ್ರಗಳ, ಪರಿಶೀಲನೆ ನಡೆದಿದೆ

ಸಚಿವ ಸತೀಶ್ ಜಾರಕಿಹೊಳಿ ಹಾಗೂ ಅವರ ಪುತ್ರಿ, ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ

ಅಕ್ರಮ ಹಣ ವರ್ಗಾವಣೆ ಕುರಿತಂತೆ ನಡೆದಿರುವ ಕೋಟ್ಯಂತರ ರೂ ಅಕ್ರಮದ ಆರೋಪಗಳಿಗೆ ಸಂಬಂಧಿಸಿದಂತೆ ದಾಳಿ ಕೈಗೊಂಡು ಪರಿಶೀಲನೆ ನಡೆಸಲಾಗಿದೆ ಎಂದು ಇಡಿ ಮೂಲಗಳು ತಿಳಿಸಿವೆ.

**ಫೆಮಾ ಹಾಗೂ ಅಕ್ರಮ ಹಣ ವರ್ಗಾವಣೆ ಆರೋಪಗಳ ಹಿನ್ನೆಲೆಯಲ್ಲಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಬೆಂಗಳೂರು, ಬೆಳಗಾವಿ, ಮಹಾರಾಷ್ಟ್ರ ಸೇರಿದಂತೆ 18ಕ್ಕೂ ಹೆಚ್ಚು ಸ್ಥಳಗಳಲ್ಲಿ ಇಡಿ ಅಧಿಕಾರಿಗಳು ಏಕಕಾಲದಲ್ಲಿ ಶೋಧ ನಡೆಸಿದ್ದಾರೆ. 178 ಕೋಟಿಗೂ ಅಧಿಕ ಅಬಕಾರಿ ಅಕ್ರಮದ ಆರೋಪದ ಬೆನ್ನಲ್ಲೇ ಆಸ್ತಿ ದಾಖಲೆ, ಬ್ಯಾಂಕ್ ಖಾತೆ ಹಾಗೂ ಹಣಕಾಸು ವ್ಯವಹಾರಗಳ ಪರಿಶೀಲನೆ ಮುಂದುವರಿದಿದೆ.**

178 ಕೋಟಿ ಅಕ್ರಮ: ಇಡಿ ಅಧಿಕಾರಿಗಳ ಪ್ರಾಥಮಿಕ ತನಿಖೆಯ ವೇಳೆ 178 ಕೋಟಿ ರೂ.ಗೂ ಅಧಿಕ ಅಬಕಾರಿ ಅಕ್ರಮ ನಡೆದಿರುವ ಸುಳಿವು ಲಭ್ಯವಾಗಿದೆ. ಅಷ್ಟೇ ಅಲ್ಲದೆ, ಕೋಟ್ಯಂತರ ರೂ. ಮೊತ್ತದ ವಿದೇಶಿ ಹಣ ವರ್ಗಾವಣೆ ನಡೆದಿರುವ ಶಂಕೆಯಿದ್ದು, ಅಧಿಕಾರಿಗಳು ಆಸ್ತಿ ಪಾಸ್ತಿ ಕಡತಗಳು, ಬ್ಯಾಂಕ್ ಖಾತೆಗಳು ಹಾಗೂ ಮಹತ್ವದ ದಾಖಲೆಗಳ ಸಮಗ್ರ ತನಿಖೆ ನಡೆಸುತ್ತಿದ್ದಾರೆ.

ಸುಮಾರು 25ಕ್ಕೂ ಹೆಚ್ಚು ಇಡಿ ಅಧಿಕಾರಿಗಳು ಅತ್ಯಂತ ಯೋಜಿತವಾಗಿ ಬೆಳಗಿನ ಜಾವ 4 ಗಂಟೆಯಿಂದಲೇ ದಾಳಿಗೆ ಯೋಜನೆ ರೂಪಿಸಿಕೊಂಡು, ಮುಂಜಾನೆ 7 ಗಂಟೆಗೆ ಭದ್ರತಾ ಸಿಬ್ಬಂದಿಯೊಂದಿಗೆ ಏಕಕಾಲಕ್ಕೆ ಸಚಿವರ ಮನೆ ಹಾಗೂ ಕಚೇರಿಗಳ ಮೇಲೆ ದಾಳಿ ನಡೆಸಿದ್ದಾರೆ. ಡಾಲರ್ಸ್ ಕಾಲೋನಿಯಲ್ಲಿರುವ ಸಚಿವರ ಅಧಿಕೃತ ಹಾಗೂ ಸರ್ಕಾರಿ ನಿವಾಸ ಸೇರಿದಂತೆ ರಾಜಧಾನಿಯ ಒಟ್ಟು 6 ಕಡೆಗಳಲ್ಲಿ ಪರಿಶೀಲನೆ ಮುಂದುವರಿದಿದೆ. 2ನೇ ಪುಟಕ್ಕೆ...


# ಬಡ ರೈತರಿಗೆ ಉಚಿತ ಉಳುಮೆ

**ಮೂರು ಎಕರೆಗಿಂತ ಕಡಿಮೆ ಜಮೀನು ಹೊಂದಿರುವ 59 ಲಕ್ಷ ರೈತರಿಗೆ ಉಚಿತ ಉಳುಮೆ ಸೌಲಭ್ಯ ಕಲ್ಪಿಸುವ 'ಮುಖ್ಯಮಂತ್ರಿ ನೇಗಿಲಯೋಗಿ' ಯೋಜನೆಗೆ ಸಂಪುಟ ಅನುಮೋದನೆ ನೀಡಿದೆ. 31 ತಾಲೂಕುಗಳಲ್ಲಿ ಪ್ರಾಯೋಗಿಕವಾಗಿ ಜಾರಿಗೆ ಬರಲಿರುವ ಯೋಜನೆಗೆ ರೂ 152 ಕೋಟಿ ಅನುದಾನ ಮೀಸಲಿಡಲಾಗಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರ 100 ದಿನ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ರೈತರು, ಬಡವರು ಹಾಗೂ ಕಾರ್ಮಿಕರಿಗೆ ಅನುಕೂಲವಾಗುವ ಹಲವು ಹೊಸ ಯೋಜನೆಗಳಿಗೆ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.

ಮೂರು ಎಕರೆಗಿಂತ ಕಡಿಮೆ ಜಮೀನು ಹೊಂದಿರುವ ರೈತರಿಗೆ ಸರ್ಕಾರವೇ ಟ್ರ್ಯಾಕ್ಟರ್‌ಗಳನ್ನು ಬಾಡಿಗೆಗೆ ಪಡೆದು ಉಚಿತವಾಗಿ ಉಳುಮೆ ಮಾಡಿಕೊಡುವ 'ಮುಖ್ಯಮಂತ್ರಿ ನೇಗಿಲಯೋಗಿ' ಯೋಜನೆ ಜಾರಿಗೆ ಬರಲಿದೆ. ಪ್ರಾಯೋಗಿಕವಾಗಿ 31 ತಾಲೂಕುಗಳಲ್ಲಿ ಯೋಜನೆ ಆರಂಭಿಸಲು ರೂ 152 ಕೋಟಿ ಮೀಸಲಿಡಲಾಗಿದ್ದು, ಸುಮಾರು 59 ಲಕ್ಷ ರೈತರಿಗೆ ಇದರ ಪ್ರಯೋಜನವಾಗಲಿದೆ.



ಬಡವರಿಗೆ ರಾಜ್ಯದ 31 ಜಿಲ್ಲೆಗಳಲ್ಲಿ 15 ಲಕ್ಷ ನಿವೇಶನ ಹಂಚಿಕೆ ಮಾಡಲು ಸರ್ಕಾರ ನಿರ್ಧರಿಸಿದೆ. ಮೊದಲ ಹಂತದಲ್ಲಿ ಎರಡು ತಿಂಗಳೊಳಗೆ ಐದು ಲಕ್ಷ ನಿವೇಶನ ಹಂಚುವ ಗುರಿ ಹೊಂದಿದ್ದು, ಎಸ್‌ಸಿ, ಎಸ್‌ಟಿ ಹಾಗೂ ಹಿಂದುಳಿದ ವರ್ಗಗಳಿಗೆ ಆದ್ಯತೆ ನೀಡಲಾಗುವುದು.

ಈಗಾಗಲೇ ಸುಮಾರು 10 ಸಾವಿರ ಎಕರೆ ಭೂಮಿ ಗುರುತಿಸಲಾಗಿದೆ.

ಕೈಗಾರಿಕೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗಾಗಿ 'ಶ್ರಮಿಕ್ ನಿವಾಸ' ಯೋಜನೆಯಡಿ ದೊಡ್ಡ ಕಂಪನಿಗಳ ಸಹಕಾರದಲ್ಲಿ 10 ಸಾವಿರ ಮನೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ.

ಮನೆ ನಿರ್ಮಾಣಕ್ಕೆ ಅಗತ್ಯ ಭೂಮಿ ಹಾಗೂ ವಿವಿಧ ಪ್ರೋತ್ಸಾಹಧನದ ಮೂಲಕ ಕಂಪನಿಗಳಿಗೆ ಸರ್ಕಾರ ನೆರವು ನೀಡಲಿದೆ. 2ನೇ ಪುಟಕ್ಕೆ...

### ಇತರ ಪ್ರಮುಖ ನಿರ್ಧಾರಗಳು

- ಜವಳಿ ಮತ್ತು ಸಿದ್ಧ ಉಡುಪು ನೀತಿ 2026–31ಕ್ಕೆ ಅನುಮೋದನೆ.
- ಚಿಕ್ಕಬಳ್ಳಾಪುರದಲ್ಲಿ ದೇಶದ ಮೊದಲ ಡ್ರೋನ್ ಪರೀಕ್ಷಾ ಸೌಲಭ್ಯ ಕೇಂದ್ರ ಸ್ಥಾಪನೆ; ರೂ 42.83 ಕೋಟಿ ಅನುದಾನ.
- ಬೆಂಗಳೂರಿನ ಐಐಐಟಿಯಲ್ಲಿ ಎಐ ಹಬ್ ಸ್ಥಾಪನೆಗೆ ರೂ 35 ಕೋಟಿ.
- ಮಹಿಳೆಯರಿಗಾಗಿ ಶಕ್ತಿ ಸ್ಮಾರ್ಟ್ ಕಾರ್ಡ್ ಯೋಜನೆಗೆ ರೂ 237 ಕೋಟಿ.
- 185 ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಟೆಲಿ–ಐಸಿಯು ಯೋಜನೆಗೆ ರೂ 10.78 ಕೋಟಿ.
- 162 ಎಕ್ಸ್‌ರೇ ಘಟಕಗಳನ್ನು ಡಿಜಿಟಲ್ ರೇಡಿಯೋಗ್ರಫಿ ವ್ಯವಸ್ಥೆಗೆ ಉನ್ನತೀಕರಿಸಲು ರೂ 40.50 ಕೋಟಿ.
- 50 ತಾಲೂಕು ಆಸ್ಪತ್ರೆಗಳಲ್ಲಿ ಕಿವಿ ಹಾಗೂ ಶ್ರವಣ ಆರೈಕೆ ಸೇವೆ ಬಲಪಡಿಸಲು ರೂ 20.39 ಕೋಟಿ.
- ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆ ನಡೆಸಲು ಅನುಮತಿ.
- ಎರಡನೇ ಮತ್ತು ಮೂರನೇ ಹಂತದ ನಗರಗಳಲ್ಲಿ ರಿಂಗ್‌ರೋಡ್ ಅಭಿವೃದ್ಧಿಗೆ ಯೋಜನೆ ರೂಪಿಸಲು ನಿರ್ಧಾರ.
- ಹಿಂದುಳಿದ ಜಿಲ್ಲೆಗಳಲ್ಲಿ ಕೈಗಾರಿಕೆ ಸ್ಥಾಪನೆಗೆ ಸಹಾಯಧನ ಹಾಗೂ ಉದ್ಯೋಗ ಸೃಷ್ಟಿಗೆ ಪ್ರೋತ್ಸಾಹಧನ ನೀಡಲು ನಿರ್ಧಾರ.

# ಅಲುಗಾಡದ ಹನುಮಾನ್!

● ವಿಕ್ರಮ ವಾಹಿನಿ । ಉಜ್ಜಯಿನಿ (ಮಧ್ಯಪ್ರದೇಶ)

ರಸ್ತೆ ಅಗಲೀಕರಣಕ್ಕಾಗಿ ತೆರವುಗೊಳಿಸಲು ಕಳೆದ ಏಳು ದಿನಗಳಲ್ಲಿ ನಾಲ್ಕು ಬಾರಿ ಪ್ರಯತ್ನಿಸಿದರೂ 8 ಅಡಿ ಎತ್ತರದ 'ಖಡೆ ಹನುಮಾನ್' ವಿಗ್ರಹ ಅಲುಗಾಡದ ಘಟನೆ ಉಜ್ಜಯಿನಿಯಲ್ಲಿ ಕುತೂಹಲಕ್ಕೆ ಕಾರಣವಾಗಿದೆ. ಭಾರಿ ಯಂತ್ರೋಪಕರಣಗಳ ಬಳಕೆಯ ಹೊರತಾಗಿಯೂ ವಿಗ್ರಹವನ್ನು ಸ್ಥಳಾಂತರಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಐಐಟಿ ಇಂದೋರ್ ತಜ್ಞರು ಪರಿಶೀಲನೆ ನಡೆಸಿದ್ದಾರೆ.

ಸತಿ ಗೇಟ್ ಬಳಿಯ ಬಡಾ ಸರಾಫಾ ಮಾರ್ಗದಲ್ಲಿ ರಸ್ತೆ ಅಗಲೀಕರಣ ಕಾಮಗಾರಿ ನಡೆಯುತ್ತಿದ್ದು, ಅದರ ವ್ಯಾಪ್ತಿಗೆ ಪ್ರಾಚೀನ ಖಡೆ ಹನುಮಾನ್ ದೇವಾಲಯವೂ ಬಂದಿದೆ. ದೇವಾಲಯದ ರಚನೆಯ ಕೆಲ ಭಾಗಗಳನ್ನು ತೆರವುಗೊಳಿಸಲಾಗಿದ್ದು, ವಿಗ್ರಹವನ್ನು ಮಾತ್ರ ಸ್ಥಳಾಂತರಿಸಲು ಸಾಧ್ಯವಾಗಿಲ್ಲ. ವಿಶೇಷ ಉಪಕರಣಗಳ ಮೂಲಕ ವಿಗ್ರಹದ ಅಡಿಪಾಯ ಹಾಗೂ ನೆಲದೊಳಗಿನ ಆಳವನ್ನು ಐಐಟಿ ತಂಡ ಪರಿಶೀಲಿಸಿದೆ.

ತಾಂತ್ರಿಕ ಪರಿಶೀಲನೆಯ ಬಳಿಕ ಐಐಟಿ ಹಾಗೂ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್‌ಐ) ವರದಿಗಳನ್ನು ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಉಜ್ಜಯಿನಿ ಪುರಸಭೆ ಅಧಿಕಾರಿಗಳು ತಿಳಿಸಿದ್ದಾರೆ. ವಿಗ್ರಹವನ್ನು



ಬಲವಂತವಾಗಿ ಸ್ಥಳಾಂತರಿಸುವುದರಿಂದ ಹಾನಿಯಾಗುವ ಸಾಧ್ಯತೆಯಿರುವುದರಿಂದ ತಜ್ಞರ ಅಭಿಪ್ರಾಯಕ್ಕೆ ಕಾಯಲಾಗುತ್ತಿದೆ.

170 ವರ್ಷಗಳಷ್ಟು ಹಳೆಯದು

ಅರ್ಚಕರ ಪ್ರಕಾರ, ಖಡೆ ಹನುಮಾನ್ ದೇವಾಲಯದ ವಿಗ್ರಹ ಸುಮಾರು 170 ವರ್ಷಗಳಷ್ಟು ಹಳೆಯದಾಗಿದ್ದು, ಐದು ತಲೆಮಾರುಗಳಿಂದ ಕುಟುಂಬವೊಂದು ದೇವಾಲಯದ ಸೇವೆ ಮಾಡುತ್ತಿದೆ. ವಿಗ್ರಹದ ಬಗ್ಗೆ ಭಕ್ತರಲ್ಲಿ ವಿಶೇಷ ನಂಬಿಕೆ ಇದ್ದು, ಸಾಮಾಜಿಕ ಜಾಲತಾಣಗಳಲ್ಲಿ ಸ್ಥಳಾಂತರದ ಸುದ್ದಿ ಹರಡಿದ ಬಳಿಕ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ದೇವಾಲಯಕ್ಕೆ ಭೇಟಿ ನೀಡುತ್ತಿದ್ದಾರೆ.

2028ರ ಸಿಂಹಸ್ಥ ಮಹೋತ್ಸವದ ಹಿನ್ನೆಲೆಯಲ್ಲಿ ಉಜ್ಜಯಿನಿಯಲ್ಲಿ ರಸ್ತೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ.

ಕೊಯ್ಲಾ ಫಾಟಕ್‌ನಿಂದ ಛತ್ರಿ ಚೌಕ್‌ವರೆಗೆ ಸುಮಾರು 1.13 ಕಿ.ಮೀ. ರಸ್ತೆ ಅಗಲೀಕರಣ ಯೋಜನೆ ಕೈಗೆತ್ತಿಕೊಳ್ಳಲಾಗಿದ್ದು, ಇದರ ವ್ಯಾಪ್ತಿಯಲ್ಲಿರುವ ಇತರ ಧಾರ್ಮಿಕ ಕೇಂದ್ರಗಳನ್ನು ಈಗಾಗಲೇ ಸ್ಥಳಾಂತರಿಸಲಾಗಿದೆ.

ವಿಗ್ರಹ ಅಲುಗಾಡದಿರುವುದನ್ನು ಕೆಲವರು ಪವಾಡವೆಂದು ನಂಬುತ್ತಿದ್ದರೂ, ಇದಕ್ಕೆ ಸಂಬಂಧಿಸಿದ ಯಾವುದೇ ವೈಜ್ಞಾನಿಕ ಪುರಾವೆ ಇನ್ನೂ ಲಭ್ಯವಾಗಿಲ್ಲ. ವಿಗ್ರಹದ ಅಡಿಪಾಯ ಆಳವಾಗಿರುವುದು ಅಥವಾ ಬಲವಾದ ರಚನೆಯಲ್ಲಿ ಸ್ಥಾಪಿಸಿರುವ ಸಾಧ್ಯತೆಯಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಅಂತಿಮ ನಿರ್ಧಾರ ತಾಂತ್ರಿಕ ವರದಿಯ ಆಧಾರದ ಮೇಲೆ ಕೈಗೊಳ್ಳಲಾಗುವುದು.

## ಕೊಲ್ಲೂರು ದೇಗುಲ ನಕಲಿ ವೆಬ್‌ಸೈಟ್?

● ವಿಕ್ರಮ ವಾಹಿನಿ । ಉಡುಪಿ

ಕೊಲ್ಲೂರಿನ ಶ್ರೀ ಮೂಕಾಂಬಿಕಾ ದೇವಸ್ಥಾನದ ವಸತಿ ಬುಕಿಂಗ್ ಸೇವೆಯ ಹೆಸರಿನಲ್ಲಿ ನಕಲಿ ವೆಬ್‌ಸೈಟ್ ಸೃಷ್ಟಿಸಿ ಭಕ್ತರಿಗೆ ವಂಚನೆ ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಕೊಲ್ಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಪ್ರಶಾಂತ್ ಕುಮಾರ್ ಶೆಟ್ಟಿ ನೀಡಿದ ದೂರಿನ ಪ್ರಕಾರ, ಅಪರಿಚಿತ ವ್ಯಕ್ತಿಯೊಬ್ಬ ದೇವಸ್ಥಾನದ ಜಗದಾಂಬಿಕಾ ಅತಿಥಿ ಗೃಹದ ಕೊಠಡಿಗಳ ಬುಕಿಂಗ್ ಸೇವೆಯಂತೆ ಕಾಣುವ ಅನಧಿಕೃತ ವೆಬ್‌ಸೈಟ್ ಸೃಷ್ಟಿಸಿದ್ದಾನೆ. ವೆಬ್‌ಸೈಟ್ ಮೂಲಕ ಬುಕಿಂಗ್ ಮಾಡಿದ ಬಳಿಕ ವಾಟ್ಸ್‌ಪ್‌ನಲ್ಲಿ ಗ್ರಾಹಕರನ್ನು ಸಂಪರ್ಕಿಸಿ, ಕ್ಯೂಆರ್ ಕೋಡ್ ಮೂಲಕ ಹಣ ಪಾವತಿಸುವಂತೆ ಸೂಚಿಸಲಾಗುತ್ತಿತ್ತು ಎನ್ನಲಾಗಿದೆ.

ಹಣ ಪಾವತಿಸಿದ ಬಳಿಕ ನಕಲಿ ರಶೀದಿ ನೀಡಲಾಗುತ್ತಿತ್ತು. ಇದನ್ನು ನಂಬಿ ದೇವಸ್ಥಾನಕ್ಕೆ ತೆರಳಿದಾಗ ವಂಚನೆಗೊಳಗಾಗಿರುವುದು ತಿಳಿದುಬಂದಿದೆ ಎಂದು ವ್ಯಕ್ತಿಯೊಬ್ಬರು ದೂರಿದ್ದಾರೆ. ದೂರಿನ ಆಧಾರದ ಮೇಲೆ ಕೊಲ್ಲೂರು ಪೊಲೀಸರು ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 66(ಸಿ) ಹಾಗೂ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) 2023ರ ಸೆಕ್ಷನ್ 318ರಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ನಕಲಿ ವೆಬ್‌ಸೈಟ್ ನಿರ್ವಹಿಸುತ್ತಿರುವವರ ಕುರಿತು ಮಾಹಿತಿ ಸಂಗ್ರಹಿಸಲಾಗುತ್ತಿದೆ.

## ಸಿಎನ್‌ಆರ್ ರಾವ್‌ಗೆ ಎಸ್‌ಐಆರ್ ನೋಟಿಸ್ ನೀಡಿಲ್ಲ: ಜಿಬಿಎ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತ ರತ್ನ ಪುರಸ್ಕೃತ ಖ್ಯಾತ ವಿಜ್ಞಾನಿ ಪ್ರೊ. ಸಿ.ಎನ್.ಆರ್. ರಾವ್ ಅವರಿಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಸಂಬಂಧ ಯಾವುದೇ ನೋಟಿಸ್ ಜಾರಿ ಮಾಡಿಲ್ಲ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಸ್ಪಷ್ಟಪಡಿಸಿದೆ.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪ್ರೊ. ಸಿ.ಎನ್.ಆರ್. ರಾವ್ ಅವರ ಹೆಸರಿನ ಕುರಿತು ಗೊಂದಲ ಉಂಟಾಗಿರುವ ಹಿನ್ನೆಲೆಯಲ್ಲಿ ಜಿಬಿಎ ಈ ಸ್ಪಷ್ಟನೆ ನೀಡಿದೆ. 2002ರ ಮತದಾರರ ಪಟ್ಟಿಯಲ್ಲಿ 76–ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದಲ್ಲಿ ಅವರ ಹೆಸರು 'ರಾಮ' ಎಂದು ನಮೂದಾಗಿತ್ತು. ಪ್ರಸ್ತುತ 157–ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ಭಾಗ ಸಂಖ್ಯೆ 59ರಲ್ಲಿ ಕ್ರಮ ಸಂಖ್ಯೆ 187ರಲ್ಲಿ 'ಸಿ.ಎನ್.ಆರ್. ರಾವ್' ಎಂಬ ಹೆಸರಿನಲ್ಲಿ ಅವರು ಮತದಾರರಾಗಿ ನೋಂದಣಿಯಾಗಿದ್ದಾರೆ.

ಹಳೆಯ ಮತ್ತು ಪ್ರಸ್ತುತ ಮತದಾರರ ಪಟ್ಟಿಯಲ್ಲಿನ ಹೆಸರಿನ ವ್ಯತ್ಯಾಸ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆಯಡಿ ವಿಚಾರಣೆ ನಡೆಸುವ ಅಗತ್ಯವಿದೆಯೇ ಎಂಬುದನ್ನು ಪರಿಶೀಲಿಸಲಾಗಿದೆ. ಆದರೆ ಪ್ರೊ. ಸಿ.ಎನ್.ಆರ್. ರಾವ್ ಅವರಿಗೆ ಯಾವುದೇ ನೋಟಿಸ್ ಜಾರಿ ಮಾಡಿಲ್ಲ ಎಂದು ಜಿಬಿಎ ತಿಳಿಸಿದೆ.

ಹೆಸರಿನಲ್ಲಿನ ವ್ಯತ್ಯಾಸವನ್ನು ಪರಿಗಣಿಸಿ, ಅವರಿಗೆ ನೋಟಿಸ್ ನೀಡಿ ವಿಚಾರಣೆ ನಡೆಸುವ ಬದಲು ಅಂತಿಮ ಮತದಾರರ ಪಟ್ಟಿಯಲ್ಲಿ ಅವರ ಹೆಸರು ಸೇರ್ಪಡೆಗೆ ಶಿಫಾರಸು ಮಾಡಲಾಗಿದೆ. ಈ ಶಿಫಾರಸಿನಂತೆ ಅಂತಿಮ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಪ್ರಾಧಿಕಾರ ತಿಳಿಸಿದೆ. 2ನೇ ಪುಟಕ್ಕೆ...

## 37 ವರ್ಷಗಳ ಬಳಿಕ ವಿದ್ಯಾರ್ಥಿ ಚುನಾವಣೆ

**37 ವರ್ಷಗಳ ಬಳಿಕ ರಾಜ್ಯದ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆ ಮರುಜಾರಿಗೆ ಬರಲಿದೆ. 2026–27ನೇ ಶೈಕ್ಷಣಿಕ ಸಾಲಿನಿಂದ ಚುನಾವಣೆ ನಡೆಸಲು ಸಂಪುಟ ನಿರ್ಧರಿಸಿದ್ದು, ರಾಜಕೀಯ ಪಕ್ಷಗಳು ಹಾಗೂ ಅವುಗಳ ವಿದ್ಯಾರ್ಥಿ ಸಂಘಟನೆಗಳ ಪ್ರಚಾರಕ್ಕೆ ಅವಕಾಶ ನೀಡದಿರಲು ತೀರ್ಮಾನಿಸಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ 37 ವರ್ಷಗಳಿಂದ ಸ್ಥಗಿತಗೊಂಡಿದ್ದ ವಿದ್ಯಾರ್ಥಿ ಸಂಘಗಳ ಚುನಾವಣೆಯನ್ನು ಮರುಜಾರಿಗೊಳಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ವಿಧಾನಸೌಧದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ.

ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ, ಹೊಣೆಗಾರಿಕೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ 2026–27ನೇ ಶೈಕ್ಷಣಿಕ ಸಾಲಿನಿಂದಲೇ ಚುನಾವಣೆ ನಡೆಸಲು ತೀರ್ಮಾನಿಸಲಾಗಿದೆ. 1989ರಲ್ಲಿ ಆಗಿನ ವೀರೇಂದ್ರ ಪಾಟೀಲ್ ನೇತೃತ್ವದ ಸರ್ಕಾರವು ಕಾಲೇಜುಗಳಲ್ಲಿ ಹೆಚ್ಚುತ್ತಿದ್ದ ಹಿಂಸಾಚಾರ, ಗೂಂಡಾಗಿರಿ ಹಾಗೂ ರಾಜಕೀಯ ಹಸ್ತಕ್ಷೇಪದ ಹಿನ್ನೆಲೆಯಲ್ಲಿ ವಿದ್ಯಾರ್ಥಿ ಸಂಘದ ಚುನಾವಣೆಗಳನ್ನು ನಿಷೇಧಿಸಿತ್ತು.

10 ಮಂದಿ ಪದಾಧಿಕಾರಿಗಳ ಆಯ್ಕೆ

ವಿದ್ಯಾರ್ಥಿ ಸಂಘದಲ್ಲಿ ಒಬ್ಬ ಅಧ್ಯಕ್ಷ, ಒಬ್ಬ ಮಹಿಳೆ ಸೇರಿದಂತೆ ಇಬ್ಬರು ಉಪಾಧ್ಯಕ್ಷರು ಹಾಗೂ ಒಬ್ಬ ಕಾರ್ಯದರ್ಶಿ ಇರಲಿದ್ದಾರೆ. ಇಬ್ಬರು ಮಹಿಳೆಯರು ಸೇರಿದಂತೆ ಒಟ್ಟು ಆರು ಮಂದಿ ಜಂಟಿ ಕಾರ್ಯದರ್ಶಿಗಳನ್ನು ಆಯ್ಕೆ ಮಾಡಲಾಗುತ್ತದೆ. ಚುನಾವಣೆಯಲ್ಲಿ ಯಾವುದೇ ರೀತಿಯ ಮೀಸಲಾತಿ ಇರುವುದಿಲ್ಲ.

**ರಾಜಕೀಯ ಪ್ರಚಾರಕ್ಕೆ ಕಡಿವಾಣ**

ವಿದ್ಯಾರ್ಥಿ ಸಂಘದ ಚುನಾವಣೆಯಲ್ಲಿ ರಾಜಕೀಯ ಪಕ್ಷಗಳಿಗೆ ಹಾಗೂ ಅವುಗಳ ವಿದ್ಯಾರ್ಥಿ ಸಂಘಟನೆಗಳಿಗೆ ಅವಕಾಶ ಇರುವುದಿಲ್ಲ. ಯಾವುದೇ ರಾಜಕೀಯ ಪಕ್ಷ ಅಥವಾ ಸಂಘಟನೆಗಳು ಕಾಲೇಜುಗಳಿಗೆ ತೆರಳಿ ಪ್ರಚಾರ ನಡೆಸುವಂತಿಲ್ಲ. ಚುನಾವಣಾ ಪ್ರಕ್ರಿಯೆ ಶಿಕ್ಷಣ ಸಂಸ್ಥೆಗಳ ನಿಯಮಾನುಸಾರ ನಡೆಯಲಿದೆ.

ಯಾವುದೇ ಕಾಲೇಜಿನ ಎಲ್ಲ ವಿದ್ಯಾರ್ಥಿಗಳೂ ಚುನಾವಣೆ ನಡೆಸುವುದು ಬೇಡ ಎಂದು ಒಮ್ಮತದ ಅಭಿಪ್ರಾಯ ವ್ಯಕ್ತಪಡಿಸಿದರೆ, ಅಂತಹ ಸಂಸ್ಥೆಯಲ್ಲಿ ಚುನಾವಣೆ ನಡೆಸಲಾಗುವುದಿಲ್ಲ ಎಂದು ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ವಿದ್ಯಾರ್ಥಿಗಳಲ್ಲಿ ಚುನಾವಣೆ ಹಾಗೂ ಪ್ರಜಾಪ್ರಭುತ್ವದ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ, ಆಯ್ಕೆಯಾಗುವ ಪ್ರತಿನಿಧಿಗಳು ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆಡಳಿತದ ಗಮನಕ್ಕೆ ತರುವ ವೇದಿಕೆಯಾಗುವ ನಿರೀಕ್ಷೆಯಿದೆ.

## ಪ್ರವಾಹದ ಬೆನ್ನಲ್ಲೇ ನೇಪಾಳದಲ್ಲಿ ಭೂಕಂಪ

● ವಿಕ್ರಮ ವಾಹಿನಿ । ಕಠ್ಮಂಡು (ನೇಪಾಳ)

ಭೀಕರ ಪ್ರವಾಹದಿಂದ ತತ್ತರಿಸಿರುವ ನೇಪಾಳದಲ್ಲಿ ಇದೀಗ ಭೂಕಂಪ ಸಂಭವಿಸಿದ್ದು, ಜನರಲ್ಲಿ ಆತಂಕ ಮೂಡಿಸಿದೆ. ದೇಶದ ವಾಯುವ್ಯ ಭಾಗದಲ್ಲಿರುವ ಮುಸ್ತಾಂಗ್ ಜಿಲ್ಲೆಯಲ್ಲಿ ಮಂಗಳವಾರ ರಾತ್ರಿ 5.3 ತೀವ್ರತೆಯ ಭೂಕಂಪ ದಾಖಲಾಗಿದೆ.

ರಾತ್ರಿ 9.53ಕ್ಕೆ ಲೋಮಂಥಂಗ್ ಪ್ರದೇಶದಲ್ಲಿ ಭೂಕಂಪದ ಕೇಂದ್ರಬಿಂದು ಪತ್ತೆಯಾಗಿದೆ ಎಂದು ರಾಷ್ಟ್ರೀಯ ಭೂಕಂಪ ಮೇಲ್ವಿಚಾರಣಾ ಮತ್ತು ಸಂಶೋಧನಾ ಕೇಂದ್ರ ತಿಳಿಸಿದೆ. ಮುಸ್ತಾಂಗ್ ಸೇರಿದಂತೆ ಮನಾಂಗ್, ಡಾಲ್ಪ್ ಮತ್ತು ಮಯಾಗ್ಡಿ ಜಿಲ್ಲೆಗಳಲ್ಲಿಯೂ ಭೂಮಿ ನಡುಗಿರುವ ಅನುಭವವಾಗಿದೆ. ಭೂಕಂಪದಿಂದ ಈವರೆಗೆ ಯಾವುದೇ ಹಾನಿ ಸಂಭವಿಸಿರುವ ಬಗ್ಗೆ ವರದಿಯಾಗಿಲ್ಲ.

ಇತ್ತೀಚೆಗೆ ನೇಪಾಳದ ಉತ್ತರ ಮತ್ತು ಮಧ್ಯ ಭಾಗಗಳಲ್ಲಿ ಭೀಕರ ಪ್ರವಾಹ ಸಂಭವಿಸಿತ್ತು. ಆಗಸ್ಟ್ 26ರಂದು ನೇಪಾಳ–ಟಿಬೆಟ್ ಗಡಿಯ ಬಳಿ ಹಿಮಪಾತದಿಂದ ಉಂಟಾದ ಹಠಾತ್ ಪ್ರವಾಹದಲ್ಲಿ ಭೋಟೆಕೋಶಿ ನದಿ ಉಕ್ಕಿ ಹರಿದ ಪರಿಣಾಮ ನೂರಾರು ಮನೆಗಳು, ವಾಹನಗಳು, ರಸ್ತೆಗಳು, ಸೇತುವೆಗಳು ಹಾಗೂ ಜಲವಿದ್ಯುತ್ ಯೋಜನೆಗಳಿಗೆ ಹಾನಿಯಾಗಿತ್ತು.

ಇದರ ನಡುವೆ ಗಂಡಕಿ ಪ್ರಾಂತ್ಯದ ಪರ್ಬತ್ ಜಿಲ್ಲೆಯ ಕಿಮ್ರುಂಗ್ ನದಿಯಲ್ಲಿ ಭೂಕುಸಿತದಿಂದ ನೀರಿನ ಹರಿವಿಗೆ ಅಡ್ಡಿಯುಂಟಾಗಿದ್ದು, ಕೆಳಭಾಗದ ಪ್ರದೇಶಗಳಲ್ಲಿ ಪ್ರವಾಹದ ಅಪಾಯ ಎದುರಾಗಿದೆ.

ನಯಾಪುಲ್, ಬಿರೆಥಾಂಟಿ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳ ನಿವಾಸಿಗಳು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ. ಕಿಮ್ರುಂಗ್ ನದಿ ಮೋದಿ ನದಿಯ ಉಪನದಿಯಾಗಿದ್ದು, ಪರಿಸ್ಥಿತಿಯನ್ನು ಅಧಿಕಾರಿಗಳು ಗಮನಿಸುತ್ತಿದ್ದಾರೆ.

# ವಿಶಿಷ್ಟ

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

"ಜಗತ್ತಿನಲ್ಲಿ ಎಂಥವರೇ ಆಗಿರಲಿ ರೋಗ, ದುಃಖ ಮುಪ್ಪು, ಮತ್ತು ಸಾವು, ಈ ನಾಲ್ಕರಿಂದ ತಪ್ಪಿಸಿಕೊಳ್ಳಲು * ಯಾರಿಗೂ ಸಾಧ್ಯವಿಲ್ಲ ..! ಇದು ತತ್ವಜ್ಞಾನವಲ್ಲ ಪ್ರಕೃತಿ ಸತ್ಯ."

### ದಿನ ಪಂಚಾಂಗ

ಸೆಪ್ಟೆಂಬರ್, 10-2026, ಗುರುವಾರ ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ.
ಚತುರ್ದಶಿ ತಿಥಿ ಬೆ-10:11
ಮಖ ನಕ್ಷತ್ರ ಮ-02:52
ರಾಹುಕಾಲ ಮ-01:48-03:20
ಹುಬ್ಬಳ್ಳಿ ಗುರುಸಿದ್ಧೇಶ್ವರ ರಥ, ಕೊಡಿಪ್ಪಾಡಿ ಜನಾರ್ದನತೀರ್ಥ ಪುಣ್ಯದಿನ, ತಳಕಲ್ಲ ವೀರಭದ್ರ ರಥ, ಮುಚಖಂಡಿ ವೀರಭದ್ರ ಚಿಕ್ಕ ರಥ ಹಾಗೂ ಅಗ್ನಿ ಉತ್ಸವ, ಹಾವೇರಿ । ಗುತ್ತಲ ವೀರಭದ್ರ ಅಗ್ನಿಕುಂಡ ಹಾಗೂ ಜಾತ್ರೆ, ಜಾಗವೇಲು ಆಂಜನೇಯ ಉತ್ಸವ, ಒಂಟಿಯಂಗಡಿ ಜಾತ್ರೆ, ವರವಿ ರಥ

### ಆಧ್ಯಾತ್ಮ

## ಸೂರ್ಯ, ಚಂದ್ರ, ಗಾಳಿಯ ಸಂಪರ್ಕವಿಲ್ಲದ ನೀರು ಬಳಕೆಗೆ ಅಯೋಗ್ಯ



● ವಿಕ್ರಮ ವಾಹಿನಿ । ಗೋಕರ್ಣ

ಸೂರ್ಯ, ಚಂದ್ರ ಹಾಗೂ ಗಾಳಿಯ ಸಂಸರ್ಗವನ್ನು ಹೊಂದಿರುವ ನೀರು ಮಾತ್ರ ಬಳಕೆಗೆ ಯೋಗ್ಯ. ಸೂರ್ಯ ಕಿರಣ ಕ್ರಿಮಿ ನಾಶಕ ಹಾಗೂ ಜೀವ ಚೈತನ್ಯದ ಸೆಲೆಯಾದರೆ, ಚಂದ್ರ ಕಿರಣ ನೀರಿಗೆ ತಂಪು ನೀಡುವ ಜೊತೆಗೆ ಔಷಧೀಯ ಗುಣಗಳನ್ನು ತುಂಬುತ್ತದೆ ಹಾಗೂ ವಾಯುವಿನಿಂದಾಗಿ ನೀರು ಸ್ವಯಂ ಶುದ್ಧಿಯನ್ನು ಹೊಂದುತ್ತದೆ. ಹಾಗಾಗಿ ಸೂರ್ಯ, ಚಂದ್ರ ಮತ್ತು ಗಾಳಿಯ ಸಂಪರ್ಕವಿಲ್ಲದ ನೀರು ಬಳಕೆಗೆ ಅಯೋಗ್ಯ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 09.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ನದಿ ನೀರಿನ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಇಂದು ಸೂರ್ಯ, ಚಂದ್ರ ಹಾಗೂ ಗಾಳಿಯ ಸಂಪರ್ಕ ಇಲ್ಲದ ನೀರನ್ನೇ ನಾವು ಬಳಸುತ್ತಿದ್ದೇವೆ. ಸೂರ್ಯನ ಬೆಳಕು ಬೀಳದಂತೆ ಸಿಮೆಂಟು ಅಥವಾ ಪ್ಲಾಸ್ಟಿಕ್ ಟ್ಯಾಂಕುಗಳಲ್ಲಿ ನೀರನ್ನು ಸಂಗ್ರಹಿಸಿ, ಪ್ಲಾಸ್ಟಿಕ್ ಪೈಪುಗಳಲ್ಲಿ ತಂದು ನೀರನ್ನು ಬಳಸುತ್ತಿದ್ದೇವೆ.

ಆಧುನಿಕ ವಿಜ್ಞಾನ ಸೂರ್ಯನ ಸಂಪರ್ಕಕ್ಕೆ ಬಂದ ನೀರಿನಲ್ಲಿ ಜೈವಿಕ ಕ್ರಿಯೆ ನಡೆದು ನೀರು ಬಳಕೆಗೆ ಅಯೋಗ್ಯವಾಗುತ್ತದೆ ಎಂದು ಹೇಳುತ್ತದೆ. ಆದರೆ ಅಧುನಿಕ ವಿಜ್ಞಾನದ ಈ ಸೂತ್ರಕ್ಕೆ ವಿರುದ್ಧವಾಗಿಯೇ ಇಲ್ಲಿಯ ವರೆಗಿನ ಮನುಷ್ಯಕುಲ ಬದುಕಿದೆ. ಸೂರ್ಯ – ಚಂದ್ರ – ಗಾಳಿಯ ಸಂಪರ್ಕಕ್ಕೆ ಬಂದ ನೀರನ್ನು ಕುಡಿದೇ ಯುಗಯುಗಾಂತರಗಳಿಂದ ನಮ್ಮ ಪೂರ್ವಜರು ಬದುಕಿದ್ದಾರೆ. ಹಾಗಾಗಿ ಈ ಆಧುನಿಕ ಚಿಂತನೆಯನ್ನು ಮತ್ತು ನಾವು ಕುಡಿಯುವ ನೀರನ್ನು ಒಮ್ಮೆ ಅವಲೋಕಿಸಬೇಕಿದೆ ಎಂದು ಕರೆ ನೀಡಿದರು.

ಆಯುರ್ವೇದದಲ್ಲಿ ಹಿಮ ಕರಗಿದ ನೀರು, ಇಬ್ಬನಿಯ ನೀರು, ಕ್ಷಣ ಮಾತ್ರ ಬಂದು ಹೋಗುವ ಮಳೆಯ ನೀರು, ವೇಗವಾಗಿ ಮತ್ತು ನಿಧಾನವಾಗಿ ಹರಿಯುವ ನದಿಯ ನೀರು, ಕಲ್ಲಿನ ಮೇಲೆ ಮತ್ತು ಮರಳಿನ ಮೇಲೆ ಹರಿಯುವ ನೀರು ಹಾಗೂ ಮಳೆಗಾಲದಲ್ಲಿ ಮಾತ್ರ ಹರಿಯು ನದಿಗಳ ನೀರು ಸೇರಿದಂತೆ ಅನೇಕ ವಿಧಗಳ ಕುರಿತಾಗಿ ಸವಿಸ್ತಾರವಾಗಿ ಚರ್ಚಿಸಿದ್ದು, ಸುಶ್ರುತರು ಬೇರೆಬೇರೆ ದಿಕ್ಕುಗಳಿಗೆ ಹರಿಯುವ ಹಾಗೂ ಬೇರೆಬೇರೆ ಪರ್ವತಗಳಿಂದ ಉಗಮಿಸುವ ನದಿಯ ನೀರಿನ ಗುಣಾವಗುಣಗಳ ಕುರಿತಾಗಿ ವಿಮರ್ಶಿಸಿದ್ದಾರೆ. ಇದು ಕುಡಿಯುವ ನೀರಿನ ಹಿಂದೆ ನಮ್ಮ ಪೂರ್ವಜರಲ್ಲಿದ್ದ ಅಪರಿಮಿತವಾದ ಚಿಂತನೆಯನ್ನು ಸೂಚಿಸುತ್ತದೆ ಎಂದು ವಿವರಿಸಿದರು.

ನಾರಾಯಣ ಭಟ್ ಸಾದಂಗಾಯ ಕುಟುಂಬದವರು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ಉದ್ಯಮಿ ನಿಡ್ಲೆ ರಾಮ ಭಟ್, ರವಿಶಂಕರ್ ಭಟ್ ಕಡತೋಕ, ಉದ್ಯಮಿ ಮುರಳೀಧರ್ ಪ್ರಭು, ಸುಬ್ರಾಯ್ ಭಟ್ ಕೊಣಾರೆ, ವಿ.ಎಮ್ ಹೆಗಡೆ ಆಲ್ಮನೆ, ದಿನಪ್ರಧಾನರಾಗಿ ಬಾಬು ಹೆಗಡೆ ಅಳವಳ್ಳಿ ದಂಪತಿಗಳು ಉಪಸ್ಥಿತರಿದ್ದರು.

## ಬಡ ರೈತರಿಗೆ ಉಚಿತ ಉಳುಮೆ

1ನೇ ಪುಟದಿಂದ

**ಏರೋಸ್ಪೇಸ್ ನೀತಿಗೆ ಅನುಮೋದನೆ**

2026–31ರ ಕರ್ನಾಟಕ ಏರೋಸ್ಪೇಸ್ ನೀತಿಗೆ ಸಂಪುಟ ಅನುಮೋದನೆ ನೀಡಿದ್ದು, ಮುಂದಿನ ಐದು ವರ್ಷಗಳಲ್ಲಿ ರೂ 60 ಸಾವಿರ ಕೋಟಿ ಹೂಡಿಕೆ ಹಾಗೂ 60 ಸಾವಿರ ಉದ್ಯೋಗ ಸೃಷ್ಟಿಸುವ ಗುರಿ ಹೊಂದಲಾಗಿದೆ. ಏರೋಸ್ಪೇಸ್, ರಕ್ಷಣಾ, ವಿಮಾನಯಾನ ಉತ್ಪಾದನೆ ಹಾಗೂ ನಾವೀನ್ಯತೆ ಕ್ಷೇತ್ರಗಳಿಗೆ ಉತ್ತೇಜನ ನೀಡಲಾಗುವುದು.

ಹಿಂದುಳಿದ ಜಿಲ್ಲೆಗಳಲ್ಲಿ ಕೈಗಾರಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ವಿವಿಧ ವಲಯಗಳಿಗೆ ಬಂಡವಾಳ ಸಹಾಯಧನ ಹಾಗೂ ಉದ್ಯೋಗ ಸೃಷ್ಟಿಗೆ ಪ್ರೋತ್ಸಾಹಧನ ನೀಡಲು ಸರ್ಕಾರ ನಿರ್ಧರಿಸಿದೆ. ಯಾದಗಿರಿ, ಬೀದರ್, ಕಲಬುರಗಿ, ರಾಯಚೂರು, ಕೊಪ್ಪಳ, ವಿಜಯನಗರ ಸೇರಿದಂತೆ ಆಯ್ದ ಜಿಲ್ಲೆಗಳಲ್ಲಿ ಉದ್ಯೋಗ ಸೃಷ್ಟಿಸುವ ಕಂಪನಿಗಳಿಗೆ ಪ್ರತಿ ಉದ್ಯೋಗಿಗೆ ಮಾಸಿಕ 2,500ರಂತೆ ಎರಡು ವರ್ಷಗಳವರೆಗೆ ಪ್ರೋತ್ಸಾಹಧನ ನೀಡುವ ಯೋಜನೆ ಜಾರಿಗೆ ಬರಲಿದೆ.

ಜೊತೆಗೆ ಆಟೋಮೊಬೈಲ್, ವಿದ್ಯುತ್ ವಾಹನ, ಎಲೆಕ್ಟ್ರಾನಿಕ್ಸ್, ಔಷಧ ಹಾಗೂ ವೈದ್ಯಕೀಯ ಸಾಧನಗಳಂತಹ ಕೈಗಾರಿಕೆಗಳನ್ನು ಹಿಂದುಳಿದ ಮತ್ತು ಅತಿ ಹಿಂದುಳಿದ ಪ್ರದೇಶಗಳಲ್ಲಿ ಸ್ಥಾಪಿಸಲು ಸಹಾಯಧನ ನೀಡಲು ಸಂಪುಟ ನಿರ್ಧರಿಸಿದೆ.

ಕೈಗಾರಿಕಾ ಅಭಿವೃದ್ಧಿಯ ಮೂಲಕ ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ಉದ್ಯೋಗಾವಕಾಶ ಹೆಚ್ಚಿಸುವುದು ಇದರ ಉದ್ದೇಶವಾಗಿದೆ.

# ಸತೀಶ್ ಜಾರಕಿಹೊಳಿ ವಿರುದ್ಧದ ಇಡಿ ದಾಳಿ ರಾಜಕೀಯ ಪ್ರೇರಿತ: ಡಿ.ಕೆ.ಶಿ

● ವಿಕ್ರಮ ವಾಹಿನಿ । ಬೆಂಗಳೂರು



**ಸತೀಶ್ ಜಾರಕಿಹೊಳ ಹಾಗೂ ಕುಟುಂಬದವರ ವಿರುದ್ಧದ ಇಡಿ ದಾಳ ರಾಜಕೀಯ ಪ್ರೇರಿತ ಎಂದು ಆರೋಪಿಸಿರುವ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ನಾಯಕರು ತನಿಖೆಗೆ ಹೆದರುವುದಿಲ್ಲ ಎಂದು ಹೇಳದ್ದಾರೆ. ಸರ್ಕಾರದ 100 ದಿನಗಳ ಸಂದರ್ಭದಲ್ಲ ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಲಾಗುತ್ತಿದೆ ಎಂದು ದೂರಿದ ಅವರು, ಸತೀಶ್ ಜಾರಕಿಹೊಳ ಅವರಿಗೆ ಸರ್ಕಾರ ಸಂಪೂರ್ಣ ಬೆಂಬಲ ನೀಡಲಿದೆ ಎಂದಿದ್ದಾರೆ.**

ಸಚಿವ ಸತೀಶ್ ಜಾರಕಿಹೊಳಿ ಹಾಗೂ ಅವರ ಕುಟುಂಬದವರಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ನಡೆಸುತ್ತಿರುವ ದಾಳಿ ರಾಜಕೀಯ ಪ್ರೇರಿತವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸತೀಶ್ ಜಾರಕಿಹೊಳಿ ಹಿರಿಯ ಸಚಿವರಾಗಿದ್ದು, ರಾಜಕೀಯದ ಜತೆಗೆ ಉದ್ಯಮ ಹಾಗೂ ಸಮಾಜ ಸೇವೆಯಲ್ಲೂ ತೊಡಗಿಸಿಕೊಂಡಿದ್ದಾರೆ. ಅವರು ಕಾನೂನುಬದ್ಧವಾಗಿಯೇ ವ್ಯವಹಾರ ನಡೆಸುತ್ತಿದ್ದಾರೆ. ಇಡಿ ಅಧಿಕಾರಿಗಳು ಕೇಳುವ ಪ್ರಶ್ನೆಗಳಿಗೆ ಅವರು ಸೂಕ್ತ ಉತ್ತರ ನೀಡಲಿದ್ದಾರೆ. ಹೀಗಾಗಿ ಯಾರೂ ಆತಂಕಪಡುವ ಅಗತ್ಯವಿಲ್ಲ ಎಂದರು.

ರಾಜ್ಯ ಕಾಂಗ್ರೆಸ್ ಸರ್ಕಾರ 100 ದಿನಗಳನ್ನು ಪೂರ್ಣಗೊಳಿಸುತ್ತಿರುವ ಸಂದರ್ಭದಲ್ಲಿ ಸರ್ಕಾರದ ಸಾಧನೆಗಳನ್ನು ಜನರಿಗೆ ತಿಳಿಸುವ ಬದಲು ಕಾಂಗ್ರೆಸ್ ನಾಯಕರು ಮತ್ತು ಸಚಿವರನ್ನು ತನಿಖಾ ಸಂಸ್ಥೆಗಳ ಮೂಲಕ ಗುರಿಯಾಗಿಸಲಾಗುತ್ತಿದೆ ಎಂದು ಅವರು ದೂರಿದರು. ಸತೀಶ್ ಜಾರಕಿಹೊಳಿ ಬೆಳೆಯುತ್ತಿರುವ ನಾಯಕನಾಗಿರುವುದನ್ನು ಸಹಿಸದೆ ಅವರನ್ನು ರಾಜಕೀಯವಾಗಿ ಕುಗ್ಗಿಸುವ ಪ್ರಯತ್ನ ನಡೆಯುತ್ತಿದೆ. ಆದರೆ ಇದು ಅವರಿಗೆ ತಿರುಗುಬಾಣವಾಗಲಿದೆ ಎಂದರು.

ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷವನ್ನು ವಿವಿಧ ರೀತಿಯಲ್ಲಿ ಗುರಿಯಾಗಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಕಾಂಗ್ರೆಸ್ ನಾಯಕರು, ಸಚಿವರು ಹಾಗೂ ಶಾಸಕರ ಮೇಲೂ ತನಿಖಾ ಸಂಸ್ಥೆಗಳ ಕ್ರಮ ನಡೆಯುವ ಸಾಧ್ಯತೆಯಿದ್ದು, ಎಲ್ಲರೂ ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ. ತನಿಖೆಗೆ ಕಾಂಗ್ರೆಸ್ ಹೆದರುವುದಿಲ್ಲ, ಆದರೆ ಸುಳ್ಳು ಆರೋಪ ಹಾಗೂ ಜನರನ್ನು ದಾರಿ ತಪ್ಪಿಸುವ ಪ್ರಯತ್ನವನ್ನು ಖಂಡಿಸುತ್ತೇವೆ ಎಂದು ಹೇಳಿದರು.

ಸತೀಶ್ ಜಾರಕಿಹೊಳಿ ಅವರಿಗೆ ಕಾಂಗ್ರೆಸ್ ಸರ್ಕಾರ ಸಂಪೂರ್ಣ ಬೆಂಬಲ ನೀಡಲಿದೆ. ಅವರು ಪ್ರಾಮಾಣಿಕ ಹಾಗೂ ದೂರದೃಷ್ಟಿಯುಳ್ಳ ರಾಜಕಾರಣಿಯಾಗಿದ್ದು, ಯಾವುದೇ ತಪ್ಪು ಮಾಡಿಲ್ಲ ಎಂಬ ವಿಶ್ವಾಸವಿದೆ ಎಂದು ಶಿವಕುಮಾರ್ ಹೇಳಿದರು.

ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ (ಫೆಮಾ) ಉಲ್ಲಂಘನೆ ಆರೋಪದಡಿ ದಾಳಿ ನಡೆಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಕಾನೂನಿನ ಚೌಕಟ್ಟಿನಲ್ಲಿ ವಿದೇಶಗಳಲ್ಲಿ ಹೂಡಿಕೆ ಮತ್ತು ವ್ಯವಹಾರ ನಡೆಸಲು ಅವಕಾಶವಿದೆ. ಕುಟುಂಬ ಸದಸ್ಯರು ವಿದೇಶದಲ್ಲಿ ವ್ಯವಹಾರ ಹೊಂದಿರುವುದು ತಪ್ಪಲ್ಲ. ಇಡಿ ದಾಳಿ ರಾಜಕೀಯ ಉದ್ದೇಶದಿಂದ ಕೂಡಿದೆ ಎಂದು ಆರೋಪಿಸಿದರು.

ಮಾಜಿ ಸಚಿವ ಬಿ.ನಾಗೇಂದ್ರ ಪ್ರಕರಣದ ಕುರಿತು ಮಾತನಾಡಿದ ಅವರು, ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡಿದ್ದು ರಾಜ್ಯ ಸರ್ಕಾರವೇ. ಅಕ್ರಮವಾಗಿ ವರ್ಗಾವಣೆಯಾಗಿದ್ದ ಹಣದ ಬಹುಪಾಲನ್ನು ತನಿಖಾ ಸಂಸ್ಥೆಗಳು ವಾಪಸ್ ಪಡೆದಿವೆ. ಸರ್ಕಾರದ ವಿರುದ್ಧವೇ ಬಿಜೆಪಿ ರಾಜಕೀಯ ಆರೋಪ ಮಾಡುತ್ತಿರುವುದು ಸರಿಯಲ್ಲ ಎಂದರು.

ಕೆಪಿಎಸ್‌ಸಿ ಪ್ರಕರಣದ ಕುರಿತು ಪ್ರತಿಕ್ರಿಯಿಸಿದ ಶಿವಕುಮಾರ್, ಗೃಹ ಸಚಿವ ಪ್ರಿಯಾಂಕ್ ಖರ್ಗೆ ತನಿಖೆಗೆ ಸಹಕರಿಸಿ ಹಲವು ದಾಖಲೆಗಳನ್ನು ಸಂಗ್ರಹಿಸಿದ್ದಾರೆ. ಪ್ರಕರಣದಲ್ಲಿ ತಪ್ಪಿತಸ್ಥರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ. ಕಾನೂನಿನ ಚೌಕಟ್ಟಿನೊಳಗೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ವಿಪಕ್ಷಗಳು ನೂರು ಪ್ರತಿಭಟನೆ, ಪತ್ರಿಕಾಗೋಷ್ಠಿ ನಡೆಸಿದರೂ ಕಾಂಗ್ರೆಸ್ ಸರ್ಕಾರ ಯಾವುದಕ್ಕೂ ಹೆದರುವುದಿಲ್ಲ. ವಿರೋಧಿಗಳು ಹೆಚ್ಚಿದ್ದಷ್ಟೂ ನಾವು ಹೆಚ್ಚು ಎಚ್ಚರಿಕೆಯಿಂದ ಕಾರ್ಯನಿರ್ವಹಿಸುತ್ತೇವೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

## 'ಜೌಹರ್' ಕುರಿತು ಹೇಳಿಕೆ: ನಟಿ ಸ್ವರಾ ಭಾಸ್ಕರ್‌ಗೆ ಕಾನೂನು ನೋಟಿಸ್

● ವಿಕ್ರಮ ವಾಹಿನಿ । ಮುಂಬೈ

ರಾಣಿ ಪದ್ಮಾವತಿ ಸೇರಿದಂತೆ ರಾಜಪೂತ ಮಹಿಳೆಯರು ಶೀಲರಕ್ಷಣೆಗಾಗಿ ಕೈಗೊಂಡಿದ್ದ 'ಜೌಹರ್' ಪದ್ಧತಿಯ ಕುರಿತು ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ನಟಿ ಸ್ವರಾ ಭಾಸ್ಕರ್ ಅವರಿಗೆ ಹಿಂದೂ ವಿಧಿಜ್ಞ ಪರಿಷತ್ತು ಕಾನೂನು ನೋಟಿಸ್ ಜಾರಿ ಮಾಡಿದೆ.

ಆಗಸ್ಟ್ 31ರಂದು ನವದೆಹಲಿಯ ಇಂಡಿಯಾ ಇಂಟರ್‌ನ್ಯಾಷನಲ್ ಸೆಂಟರ್‌ನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ 'ಪದ್ಮಾವತಿ' ಹಿಂದಿ ಚಲನಚಿತ್ರದಲ್ಲಿನ ಜೌಹರ್ ಪ್ರಸಂಗವನ್ನು ವಿವರಿಸುವ ವೇಳೆ ಸ್ವರಾ ಭಾಸ್ಕರ್ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂದು ನೋಟಿಸ್‌ನಲ್ಲಿ ಆರೋಪಿಸಲಾಗಿದೆ.

ಹಿಂದೂ ವಿಧಿಜ್ಞ ಪರಿಷತ್ತಿನ ನ್ಯಾಯವಾದಿ ಅನೀಷ್ ಪರಳ್ಕರ್ ಅವರು ಕಳುಹಿಸಿರುವ ನೋಟಿಸ್‌ನಲ್ಲಿ, ಹೇಳಿಕೆಯಿಂದ ರಾಣಿ ಪದ್ಮಾವತಿ ಹಾಗೂ ಜೌಹರ್ ಮಾಡಿದ ಮಹಿಳೆಯರ ಶೌರ್ಯ,




ತ್ಯಾಗ ಮತ್ತು ಆತ್ಮಗೌರವಕ್ಕೆ ಅವಮಾನವಾಗಿದೆ. ಅಲ್ಲದೆ, ಹಿಂದೂ ಹಾಗೂ ರಜಪೂತ ಸಮುದಾಯದ ಧಾರ್ಮಿಕ ಮತ್ತು ಸಾಂಸ್ಕೃತಿಕ ಭಾವನೆಗಳಿಗೆ ಧಕ್ಕೆಯಾಗಿದೆ ಎಂದು ತಿಳಿಸಲಾಗಿದೆ.

ಹೇಳಿಕೆಯನ್ನು ತಕ್ಷಣ ಹಿಂಪಡೆದು ಸಾರ್ವಜನಿಕವಾಗಿ ಕ್ಷಮೆಯಾಚಿಸುವಂತೆ, ಸಾಮಾಜಿಕ ಮಾಧ್ಯಮ ಖಾತೆಗಳಿಂದ ಸಂಬಂಧಿತ ವೀಡಿಯೊ, ಸಂದೇಶ, ರೀಲ್ಸ್ ಹಾಗೂ ಇತರ ವಿಷಯಗಳನ್ನು ತೆಗೆದುಹಾಕುವಂತೆ ನೋಟಿಸ್‌ನಲ್ಲಿ ಆಗ್ರಹಿಸಲಾಗಿದೆ. ಜೊತೆಗೆ, ಭವಿಷ್ಯದಲ್ಲಿ ಹಿಂದೂ ಧರ್ಮ, ಪರಂಪರೆ ಹಾಗೂ ಐತಿಹಾಸಿಕ ವ್ಯಕ್ತಿಗಳ ಕುರಿತು ಅವಮಾನಕಾರಕ ಹೇಳಿಕೆ ನೀಡುವುದಿಲ್ಲ ಎಂಬ ಲಿಖಿತ ಭರವಸೆ ನೀಡಬೇಕು ಮತ್ತು 25 ಲಕ್ಷ ಪರಿಹಾರ ಪಾವತಿಸಬೇಕು ಎಂದು ಒತ್ತಾಯಿಸಲಾಗಿದೆ.

ನೋಟಿಸ್ ಸ್ವೀಕರಿಸಿದ ಏಳು ದಿನಗಳೊಳಗೆ ಬೇಡಿಕೆಗಳನ್ನು ಈಡೇರಿಸದಿದ್ದರೆ, ಸ್ವರಾ ಭಾಸ್ಕರ್ ವಿರುದ್ಧ ಕ್ರಿಮಿನಲ್ ಹಾಗೂ ಸಿವಿಲ್ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ನ್ಯಾಯವಾದಿ ಅನೀಷ್ ಪರಳ್ಕರ್ ಎಚ್ಚರಿಕೆ ನೀಡಿದ್ದಾರೆ.

## ಸಿಎನ್‌ಆರ್ ರಾವ್‌ಗೆ ಎಸ್‌ಐಆರ್ ನೋಟಿಸ್ ನೀಡಿಲ್ಲ: ಜಿಬಿಎ

1ನೇ ಪುಟದಿಂದ

ಮತದಾರರ ಪಟ್ಟಿಯ ಪರಿಷ್ಕರಣೆ ಸಂದರ್ಭದಲ್ಲಿ ಹಳೆಯ ದಾಖಲೆಗಳಲ್ಲಿನ ಹೆಸರು ಮತ್ತು ಪ್ರಸ್ತುತ ದಾಖಲೆಗಳಲ್ಲಿನ ಹೆಸರಿನ ವ್ಯತ್ಯಾಸವನ್ನು ಪರಿಶೀಲಿಸಲಾಗುತ್ತಿದೆ. ಇದೇ ಪ್ರಕ್ರಿಯೆಯ ಭಾಗವಾಗಿ ಪ್ರೊ. ಸಿ.ಎನ್.ಆರ್. ರಾವ್ ಅವರ ಹೆಸರಿನ ದಾಖಲೆಗಳನ್ನೂ ಪರಿಶೀಲಿಸಲಾಗಿದ್ದು, ಅವರ ಮತದಾರರ ನೋಂದಣಿಗೆ ಯಾವುದೇ ತೊಂದರೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಬಿಎ ಸ್ಪಷ್ಟಪಡಿಸಿದೆ.

ಹೀಗಾಗಿ ಪ್ರೊ. ಸಿ.ಎನ್.ಆರ್. ರಾವ್ ಅವರಿಗೆ ಎಸ್‌ಐಆರ್ ನೋಟಿಸ್ ಜಾರಿ ಮಾಡಲಾಗಿದೆ ಎಂಬ ಮಾಹಿತಿ ತಪ್ಪಾಗಿದ್ದು, ಈ ಕುರಿತು ಸಾರ್ವಜನಿಕರು ಯಾವುದೇ ಗೊಂದಲಕ್ಕೆ ಒಳಗಾಗಬಾರದು ಎಂದು ಜಿಬಿಎ ಮನವಿ ಮಾಡಿದೆ. ಮತದಾರರ ಪಟ್ಟಿಯಲ್ಲಿನ ಹೆಸರಿನ ವ್ಯತ್ಯಾಸ ಸರಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಬಿಎ ತಿಳಿಸಿದೆ.

# 'ಜನ ದಂಗೆ ಏಳುವ ಮುನ್ನ ವಿಧಾನಸಭೆ ವಿಸರ್ಜಿಸಿ'

● ವಿಕ್ರಮ ವಾಹಿನಿ । ಕುಡತಿನಿ



ರಾಜ್ಯ ಸರ್ಕಾರ ಜನರ ವಿಶ್ವಾಸ ಕಳೆದುಕೊಂಡಿದ್ದು, ರೈತರು, ಬಡವರು ಹಾಗೂ ಯುವಕರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಜನರು ದಂಗೆ ಏಳುವ ಪರಿಸ್ಥಿತಿ ನಿರ್ಮಾಣವಾಗುವ ಮುನ್ನ ವಿಧಾನಸಭೆ ವಿಸರ್ಜಿಸಿ ಚುನಾವಣೆಗೆ ಹೋಗುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿದರು.

ಪಾದಯಾತ್ರೆಯನ್ನುದ್ದೇಶಿಸಿ ಮಾತನಾಡಿದ ಅವರು, ಅಧಿಕಾರದಲ್ಲಿ ಎಷ್ಟು ದಿನ ಮುಂದುವರಿಯುತ್ತೀರಿ ಎಂಬುದಕ್ಕಿಂತ ಅಧಿಕಾರದಲ್ಲಿರುವ ಅವಧಿಯಲ್ಲಿ ಬಡವರು, ರೈತರು ಮತ್ತು ಯುವಜನರ ಪರವಾಗಿ ಉತ್ತಮ ಕೆಲಸ ಮಾಡುವುದು ಮುಖ್ಯ. ಸರ್ಕಾರ ನಡೆಸಲು ಸಾಧ್ಯವಿಲ್ಲವೆಂದಾದರೆ ವಿಧಾನಸಭೆ ವಿಸರ್ಜಿಸಿ ಜನರ ತೀರ್ಪು ಪಡೆಯಿರಿ ಎಂದು ಸವಾಲು ಹಾಕಿದರು.

ತಮ್ಮ ಪಕ್ಷದ ಹೋರಾಟಕ್ಕೆ ರಾಜ್ಯದ ವಿವಿಧ ಭಾಗಗಳಿಂದ ರೈತರು, ಕೂಲಿ ಕಾರ್ಮಿಕರು ಹಾಗೂ ಮಹಿಳೆಯರು ಬೆಂಬಲ ನೀಡುತ್ತಿದ್ದಾರೆ. ಬಿಜೆಪಿ ಪಾದಯಾತ್ರೆ ಹಾಗೂ ಬಳ್ಳಾರಿ ಸಮಾವೇಶಕ್ಕೆ ಸರ್ಕಾರ ಅಡ್ಡಿಪಡಿಸುತ್ತಿದೆ ಎಂದು ವಿಜಯೇಂದ್ರ ಆರೋಪಿಸಿದರು. ಅನುಮತಿ ನೀಡದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರೇ ಹೋರಾಟ ನಡೆಸುವುದಾಗಿ ಎಚ್ಚರಿಸಿದ ಬಳಿಕ ಸಮಾವೇಶಕ್ಕೆ ಅನುಮತಿ ದೊರೆತಿದೆ ಎಂದರು.

ಕಾಂಗ್ರೆಸ್ ಸರ್ಕಾರದ ಸಾಧನೆ ಬೆಲೆ ಏರಿಕೆಯಷ್ಟೇ ಎಂದು ಟೀಕಿಸಿದ ಅವರು, ಪೆಟ್ರೋಲ್, ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಹೆಚ್ಚಿಸಲಾಗಿದೆ. ಒಂದು ಕೈಯಲ್ಲಿ ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಹಣ ನೀಡುತ್ತಾ, ಮತ್ತೊಂದು ಕೈಯಲ್ಲಿ ಬೆಲೆ ಏರಿಕೆ ಮೂಲಕ ಜನರಿಂದ ಹಣ ವಸೂಲಿ ಮಾಡಲಾಗುತ್ತಿದೆ ಎಂದು ದೂರಿದರು. ರೈತರ ಸಾಲ ಮನ್ನಾ, ಗ್ರಾಮೀಣ ಪ್ರದೇಶಗಳಲ್ಲಿ ಮನೆ, ಉದ್ಯೋಗ ಹಾಗೂ ಸಾರಿಗೆ ಸೌಲಭ್ಯ ಕಲ್ಪಿಸುವಲ್ಲಿ ಸರ್ಕಾರ ವಿಫಲವಾಗಿದೆ.

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಕ್ರಮ ಹಾಗೂ ಪರಿಶಿಷ್ಟ ಜಾತಿ-ಪಂಗಡಗಳಿಗಾಗಿ ಮೀಸಲಿಟ್ಟ ಹಣವನ್ನು ಇತರ ಯೋಜನೆಗಳಿಗೆ ಬಳಸಿರುವ ವಿಚಾರವನ್ನು ಪ್ರಸ್ತಾಪಿಸಿದ ವಿಜಯೇಂದ್ರ, ದಲಿತರು ಮತ್ತು ರೈತರ ಬಗ್ಗೆ ಸರ್ಕಾರಕ್ಕೆ ಕಾಳಜಿ ಇಲ್ಲ ಎಂದು ಟೀಕಿಸಿದರು. ರಾಜ್ಯದ ರಸ್ತೆಗಳಲ್ಲಿ ಹದಗೆಟ್ಟಿರುವ ಪರಿಸ್ಥಿತಿಯಿಂದ ಅಪಘಾತಗಳು ಹೆಚ್ಚಾಗುತ್ತಿವೆ. ಸರ್ಕಾರ ಜನರ ಮೂಲಭೂತ ಸಮಸ್ಯೆಗಳಿಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

## ಎನ್‌ಡಿಎ ಸರ್ಕಾರಕ್ಕೆ ಭದ್ರ ಬುನಾದಿ: ವಿಜಯೇಂದ್ರ

● ವಿಕ್ರಮ ವಾಹಿನಿ । ಬಳ್ಳಾರಿ



ಸೆ.1ರಂದು ಆರಂಭಿಸಿರುವ 'ಬಳ್ಳಾರಿ ಚಲೋ' ಪಾದಯಾತ್ರೆ ಯಶಸ್ವಿಯಾಗಿ ಸಾಗಿದ್ದು, ಕಲ್ಯಾಣ ಕರ್ನಾಟಕದ ರೈತರು, ಯುವಕರು ಹಾಗೂ ಜನಸಾಮಾನ್ಯರ ಬೆಂಬಲದಿಂದ ಅಂತಿಮ ಹಂತ ತಲುಪಿದೆ. ಮುಂಬರುವ ದಿನಗಳಲ್ಲಿ ರಾಜ್ಯದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ರಚನೆಗೆ ಈ ಹೋರಾಟ ಭದ್ರ ಬುನಾದಿ ಹಾಕಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಬುಧವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸುಮಾರು 9 ಕಿ.ಮೀ. ಪಾದಯಾತ್ರೆ ನಡೆಸಿ ಬಳ್ಳಾರಿಯ ವಾಲ್ಮೀಕಿ ವೃತ್ತ ತಲುಪಲಿದ್ದೇವೆ. ಪಾದಯಾತ್ರೆಗೆ ಜನರಿಂದ ದೊರೆತ ಸ್ಪಂದನೆ ಹೊಸ ಆಶಾಭಾವನೆ ಮೂಡಿಸಿದೆ. ರಾಜ್ಯದಲ್ಲಿ ಅಭಿವೃದ್ಧಿ ಕುಂಠಿತವಾಗಿದೆ ಎಂದು ಆರೋಪಿಸಿದರು.

ನಾಳೆ ಬೆಳಿಗ್ಗೆ ವಿವಿಧ ದೇವಾಲಯಗಳಿಗೆ ಭೇಟಿ ನೀಡಿದ ಬಳಿಕ ಸಂಜೆ ಉಳಿದ 2.5ರಿಂದ 3 ಕಿ.ಮೀ. ಪಾದಯಾತ್ರೆ ನಡೆಯಲಿದೆ. ಸಂಜೆ 4.30ಕ್ಕೆ ಬಳ್ಳಾರಿ ನಗರದ ಮುನ್ಸಿಪಲ್ ಮೈದಾನದಲ್ಲಿ ಬೃಹತ್ ಸಮಾವೇಶ ಆಯೋಜಿಸಲಾಗಿದ್ದು, 45 ಸಾವಿರದಿಂದ 50 ಸಾವಿರಕ್ಕೂ ಅಧಿಕ ಜನರು ಭಾಗವಹಿಸುವ ನಿರೀಕ್ಷೆಯಿದೆ ಎಂದರು.

ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಜಗದೀಶ್ ಶೆಟ್ಟರ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ವಿಪಕ್ಷ ನಾಯಕರಾದ ಆರ್. ಅಶೋಕ್, ಛಲವಾದಿ ನಾರಾಯಣಸ್ವಾಮಿ, ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ದಾಸ್ ಅಗರ್ವಾಲ್, ಸಹ ಉಸ್ತುವಾರಿ ಸುಧಾಕರ್ ರೆಡ್ಡಿ ಸೇರಿದಂತೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ಹಲವು ನಾಯಕರು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. 'ಬಳ್ಳಾರಿ ಚಲೋ' ತಮ್ಮ ರಾಜಕೀಯ ಜೀವನದ ಮಹತ್ವದ ಹಾಗೂ ಮರೆಯಲಾಗದ ಹೋರಾಟವಾಗಿದೆ. ಪಾದಯಾತ್ರೆಯುದ್ದಕ್ಕೂ ರೈತರು, ಯುವಕರು, ಕುರಿಗಾಹಿಗಳು ಹಾಗೂ ಅಲೆಮಾರಿ ಸಮುದಾಯದವರೊಂದಿಗೆ ಸಂವಾದ ನಡೆಸಿರುವುದು ವೈಯಕ್ತಿಕವಾಗಿ ತೃಪ್ತಿ ತಂದಿದೆ ಎಂದರು.

ಪಾದಯಾತ್ರೆಗೆ ಅಡ್ಡಿಪಡಿಸಲಾಗುತ್ತಿದೆ ಎಂದು ಆರೋಪಿಸಿದ ವಿಜಯೇಂದ್ರ, ರಾತ್ರೋರಾತ್ರಿ ಬಿಜೆಪಿ ಬಾವುಟ ಹಾಗೂ ಬ್ಯಾನರ್‌ಗಳನ್ನು ಹರಿದು ಹಾಕಲಾಗಿದೆ. ರಕ್ಷಣೆ ನೀಡಬೇಕಾದ ಪೊಲೀಸರೇ ಹೋರಾಟಕ್ಕೆ ಅಡ್ಡಿಪಡಿಸುತ್ತಿದ್ದಾರೆ. ಕಾನೂನುಬಾಹಿರವಾಗಿ ಬಿಜೆಪಿ ಯಾವುದೇ ಚಟುವಟಿಕೆ ನಡೆಸುತ್ತಿಲ್ಲ ಎಂದು ಹೇಳಿದರು.

2028ರ ವಿಧಾನಸಭಾ ಚುನಾವಣೆಯನ್ನು ರಾಜ್ಯದ ಹಿರಿಯ ನಾಯಕರ ಒಗ್ಗಟ್ಟಿನ ನೇತೃತ್ವದಲ್ಲಿ ಎದುರಿಸಲಾಗುವುದು. ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಪಕ್ಷದ ವರಿಷ್ಠರ ಮಾರ್ಗದರ್ಶನ ಇರಲಿದೆ. ಕಾರ್ಯಕರ್ತರಲ್ಲಿ ರಣೋತ್ಸಾಹವಿದ್ದು, 'ಬಳ್ಳಾರಿ ಚಲೋ' ಹೋರಾಟದ ಅಂತ್ಯವಲ್ಲ, ಆರಂಭ ಎಂದು ವಿಜಯೇಂದ್ರ ಹೇಳಿದರು.

ಕಲ್ಯಾಣ ಕರ್ನಾಟಕದ ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ನವಲಿ ಜಲಾಶಯ ನಿರ್ಮಾಣಕ್ಕೆ ಬಿಜೆಪಿ ಸಂಪೂರ್ಣ ಬದ್ಧವಾಗಿದೆ. ಈ ಕುರಿತು ವಿಧಾನಮಂಡಲದ ಒಳಗೂ ಧ್ವನಿ ಎತ್ತಿ ಹೋರಾಟ ಮುಂದುವರಿಸಲಾಗುವುದು ಎಂದರು.

ಪಾದಯಾತ್ರೆ ಮುಕ್ತಾಯವಾದರೂ ಜನರ ಧ್ವನಿಯಾಗಿ ಬಿಜೆಪಿ ಹೋರಾಟ ಮುಂದುವರಿಯಲಿದೆ. ಜನರ ಆಶಾಭಾವನೆಗೆ ತಕ್ಕ ಜನಪರ ಸರ್ಕಾರಕ್ಕಾಗಿ ನಿರಂತರವಾಗಿ ಹೋರಾಟ ನಡೆಸಲಾಗುವುದು ಎಂದು ವಿಜಯೇಂದ್ರ ಹೇಳಿದರು.

# ಸತೀಶ್ ಜಾರಕಿಹೊಳಿ ಮೇಲೆ ಇಡಿ ಈಟಿ

1ನೇ ಪುಟದಿಂದ

**ಫೆಮಾ ಕಾಯ್ದೆ ಪ್ರಕರಣ:** ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ಅಷ್ಟೇ ಅಲ್ಲದೆ, ವಿದೇಶಗಳಲ್ಲಿ ಅಕ್ರಮ ಆಸ್ತಿ ಮತ್ತು ಹೂಡಿಕೆ ಹೊಂದಿರುವ ಗಂಭೀರ ಆರೋಪದ ಹಿನ್ನೆಲೆಯಲ್ಲಿ ಸತೀಶ್ ಜಾರಕಿಹೊಳಿ ಮೇಲೆ ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ (ಫೆಮಾ) ಅಡಿಯಲ್ಲೂ ಪ್ರಕರಣ ದಾಖಲಿಸಿಕೊಂಡು ಇಡಿ ತನಿಖೆ ಚುರುಕುಗೊಳಿಸಿದೆ.

**ಮನಿ ಲಾಂಡ್ರಿಂಗ್:** ಅಕ್ರಮವಾಗಿ ಅಥವಾ ತಪ್ಪು ದಾರಿಯಲ್ಲಿ ಗಳಿಸಿದ ಕಪ್ಪು ಹಣವನ್ನು ಕಾನೂನುಬದ್ಧವಾಗಿ ಗಳಿಸಿದ ಹಣದಂತೆ ಬದಲಾಯಿಸುವ ಕಳ್ಳಾಟವೇ ಮನಿ ಲಾಂಡ್ರಿಂಗ್. ಇದು ಒಂದು ಆರ್ಥಿಕ ಅಪರಾಧವಾಗಿದೆ.

ಮಾದಕ ದ್ರವ್ಯ ಮಾರಾಟ, ಭ್ರಷ್ಟಾಚಾರ, ಅಥವಾ ವಂಚನೆಯಿಂದ ಬಂದ ಹಣದ ಮೂಲವನ್ನು ಮರೆಮಾಚಲು ಬ್ಯಾಂಕ್ ವರ್ಗಾವಣೆ ಅಥವಾ ಬೇರೆ ವ್ಯವಹಾರಗಳ ಮೂಲಕ ಹಣವನ್ನು ತಿರುಗಿಸುವುದೇ ಮನಿ ಲಾಂಡ್ರಿಂಗ್ ಆಗಿದೆ.

**ಕಾನೂನು ಚೌಕಟ್ಟು:** ಇದು ಭಾರತ ಸರ್ಕಾರ 2002 ರಲ್ಲಿ ಜಾರಿಗೆ ತಂದ ಒಂದು ಕಠಿಣ ಕಾನೂನು. ಹಣ ಅಕ್ರಮ ವರ್ಗಾವಣೆ ತಡೆ ಇದು ಮನಿ ಲಾಂಡ್ರಿಂಗ್ ಅಪರಾಧವನ್ನು ಪತ್ತೆಹಚ್ಚಲು, ತಡೆಯಲು ಮತ್ತು ಅದರಲ್ಲಿ ತೊಡಗಿರುವವರಿಗೆ ಶಿಕ್ಷೆ ನೀಡಲು ಸರ್ಕಾರಕ್ಕೆ ಅಧಿಕಾರ ನೀಡುವ ಕಾನೂನು ಚೌಕಟ್ಟಾಗಿದೆ.


**13.3 ಕೋಟಿ ಆಸ್ತಿ:** ಸಚಿವ ಸತೀಶ್ ಜಾರಕಿಹೊಳಿ ಹಾಗೂ ಅವರ ಭಾವ (ಸಹೋದರಿಯ ಪತಿ), ಬೆಳಗಾವಿ ವಲಯ ಅಬಕಾರಿ ಹೆಚ್ಚುವರಿ ಆಯುಕ್ತ ವೈ. ಮಂಜುನಾಥ್ ಅವರ ನಿವಾಸ ಹಾಗೂ ಕಚೇರಿಗಳ ಮೇಲೆ ಜಾರಿ ನಿರ್ದೇಶನಾಲಯ ಕಾರ್ಯಾಚರಣೆಯನ್ನು ತೀವ್ರಗೊಳಿಸಿದೆ.

ಕಳೆದ ಜೂನ್ 24ರಂದು ಇದೇ ಸಚಿವ ಸತೀಶ್ ಜಾರಕಿಹೊಳಿ ಅವರ ಬಾವ ಮಂಜುನಾಥ್ ಮನೆ ಹಾಗೂ ಕಚೇರಿಗಳ ಮೇಲೆ ಮೊದಲ ಬಾರಿಗೆ ದಾಳಿ ನಡೆಸಿದ್ದ ಇಡಿ ಅಧಿಕಾರಿಗಳು, ಬೃಹತ್ ಪ್ರಮಾಣದ ನಗದು, ಚಿನ್ನಾಭರಣ ಮತ್ತು ಅಕ್ರಮ ಆಸ್ತಿ ದಾಖಲೆಗಳನ್ನು ಜಪ್ತಿ ಮಾಡಿದ್ದರು. ಬರೋಬ್ಬರಿ 5.5 ಕೋಟಿ ರೂ. ನಗದು ಹಣ ಜಪ್ತಿ, 7.8 ಕೋಟಿ ರೂ. ಮೌಲ್ಯದ ಬಂಗಾರ ಹಾಗೂ ಬೆಳ್ಳಿ ಆಭರಣಗಳು ಪತ್ತೆ. 3.3 ಲಕ್ಷ ಮೌಲ್ಯದ ವಿವಿಧ ದೇಶಗಳ ವಿದೇಶಿ ನಾಣ್ಯ/ಕರೆನ್ಸಿ ಜಪ್ತಿ ಮಾಡಲಾಗಿತ್ತು.

# ರಾಯರ ಮಠಕ್ಕೆ 16 ದಿನದಲ್ಲಿ ರೂ 3.30 ಕೋಟಿ ಕಾಣಿಕೆ

● ವಿಕ್ರಮ ವಾಹಿನಿ । ರಾಯಚೂರು

ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಆಗಸ್ಟ್-ಸೆಪ್ಟೆಂಬರ್ ಅವಧಿಯ 16 ದಿನಗಳ ಕಾಣಿಕೆ ಹುಂಡಿ ಎಣಿಕೆ ಕಾರ್ಯ ಪೂರ್ಣಗೊಂಡಿದ್ದು, ಒಟ್ಟು ರೂ 3.30 ಕೋಟಿ ಕಾಣಿಕೆ ಸಂಗ್ರಹವಾಗಿದೆ.



ಗುರು ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವದ ಹಿನ್ನೆಲೆಯಲ್ಲಿ ಮಂತ್ರಾಲಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರಿಂದ ದಾಖಲೆ ಪ್ರಮಾಣದ ಕಾಣಿಕೆ ಸಂಗ್ರಹವಾಗಿದೆ. ಒಟ್ಟು ರೂ 3,30,69,139 ಕಾಣಿಕೆ ಲಭಿಸಿದ್ದು, ಇದರಲ್ಲಿ ರೂ 3,20,66,639 ಮೌಲ್ಯದ ಕರೆನ್ಸಿ ನೋಟುಗಳು ಹಾಗೂ ರೂ 10,02,500 ಮೌಲ್ಯದ ನಾಣ್ಯಗಳು ಸೇರಿವೆ.

ಇದಲ್ಲದೆ, ಭಕ್ತರು 47 ಗ್ರಾಂ ಚಿನ್ನ ಹಾಗೂ 632 ಗ್ರಾಂ ಬೆಳ್ಳಿಯನ್ನು ಕಾಣಿಕೆ ರೂಪದಲ್ಲಿ ಸಮರ್ಪಿಸಿದ್ದಾರೆ. ಹುಂಡಿ ಎಣಿಕೆ ಕಾರ್ಯದಲ್ಲಿ ಮಠದ ನೂರಾರು ಸಿಬ್ಬಂದಿ, ಭಜನಾ ಮಂಡಳಿಗಳ ಸದಸ್ಯರು ಹಾಗೂ ಕರಸೇವಕರು ಭಾಗವಹಿಸಿದ್ದರು.

ಮುಜರಾಯಿ ಇಲಾಖೆ ಅಧಿಕಾರಿಗಳು ಹಾಗೂ ಶ್ರೀಮಠದ ಅಧಿಕಾರಿಗಳ ಸಮ್ಮುಖದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆಸಲಾಯಿತು. ಆರಾಧನಾ ಮಹೋತ್ಸವದ ಹಿನ್ನೆಲೆಯಲ್ಲಿ ಮಠಕ್ಕೆ ಭಕ್ತರ ಹರಿವು ಹೆಚ್ಚಿದ್ದು, ಇದರಿಂದ ಕಾಣಿಕೆ ಸಂಗ್ರಹದಲ್ಲಿಯೂ ಗಣನೀಯ ಏರಿಕೆಯಾಗಿದೆ.

# ಮುನಿರತ್ನ ಸೇರಿ ಹಲವರ ವಿರುದ್ಧ ಎಫ್‌ಐಆರ್

● ವಿಕ್ರಮ ವಾಹಿನಿ । ಬೆಂಗಳೂರು

ರಾಜರಾಜೇಶ್ವರಿನಗರ ಬಿಜೆಪಿ ಶಾಸಕ ಮುನಿರತ್ನ ಸೇರಿದಂತೆ ಎಂಟು ಮಂದಿಯ ವಿರುದ್ಧ ಮಹಿಳೆಯೊಬ್ಬರು ನೀಡಿದ ದೂರಿನ ಆಧಾರದ ಮೇಲೆ ರಾಜರಾಜೇಶ್ವರಿನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಪ್ರಕರಣದಲ್ಲಿ ಮೂವರು ಪೊಲೀಸ್ ಅಧಿಕಾರಿಗಳ ಹೆಸರೂ ಇದ್ದು, ಎಫ್‌ಐಆರ್ ದಾಖಲಾದ ಬೆನ್ನಲ್ಲೇ ತನಿಖೆಯನ್ನು ವಿಶೇಷ ತನಿಖಾ ತಂಡಕ್ಕೆ (ಎಸ್‌ಐಡಿ) ವರ್ಗಾಯಿಸಲಾಗಿದೆ.

ಎಫ್‌ಐಆರ್‌ನಲ್ಲಿ ಮುನಿರತ್ನ, ಕಿರಣ್ ನಾಯ್ಡು, ಲೋಹಿತ್ ಗೌಡ, ಮಂಜುನಾಥ್, ಲಕ್ಷ್ಮೀ ಜಯರಾಮ್ ಹಾಗೂ ಪೊಲೀಸ್ ಅಧಿಕಾರಿಗಳಾದ ಅಯ್ಯಣ್ಣ ರೆಡ್ಡಿ, ಬಿ.ಎನ್. ಲೋಹಿತ್ ಮತ್ತು ಸಬ್‌ಇನ್‌ಸ್ಪೆಕ್ಟರ್ ಚಂದ್ರಶೇಖರ್ ಅವರ ಹೆಸರುಗಳಿವೆ. ಇವರ ವಿರುದ್ಧ ಅತ್ಯಾಚಾರಕ್ಕೆ ಯತ್ನ, ಅಪಹರಣ, ಅಕ್ರಮ ಬಂಧನ, ಹಲ್ಲೆ, ಬೆದರಿಕೆ, ಸಂಚು ಹಾಗೂ ಮಾಹಿತಿ ತಂತ್ರಜ್ಞಾನ ಕಾಯ್ದೆಯ ವಿವಿಧ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಲಾಗಿದೆ.

2021ರಲ್ಲಿ ಹನಿಟ್ರ್ಯಾಪ್ ಉದ್ದೇಶದಿಂದ ತಮ್ಮನ್ನು ರೆಸಾರ್ಟ್‌ಗಳಿಗೆ ಕರೆದುಕೊಂಡು ಹೋಗಿ ಖಾಸಗಿ ಚಿತ್ರಗಳನ್ನು ತೆಗೆಯಲಾಗಿದೆ ಹಾಗೂ ಕಿರಣ್ ನಾಯ್ಡು ಅತ್ಯಾಚಾರಕ್ಕೆ ಯತ್ನಿಸಿದ್ದಾರೆ ಎಂದು ಮಹಿಳೆ ದೂರಿನಲ್ಲಿ ಆರೋಪಿಸಿದ್ದಾರೆ. ಇದೇ ಅವಧಿಯಲ್ಲಿ ತಮ್ಮ ವಿರುದ್ಧ ಮತ್ತೊಂದು ಪ್ರಕರಣ ದಾಖಲಿಸಿ ಮನೆ ಶೋಧಿಸಿ ಎಲೆಕ್ಟ್ರಾನಿಕ್ ಸಾಧನಗಳನ್ನು ವಶಪಡಿಸಿಕೊಂಡು ಬಂಧಿಸಲಾಗಿತ್ತು ಎಂದೂ ತಿಳಿಸಿದ್ದಾರೆ.

ನಂತರ ಮುನಿರತ್ನ ಅವರು ತಮ್ಮನ್ನು ಹಾಗೂ ಸಹೋದರಿಯನ್ನು ದೆಹಲಿಗೆ ಕರೆದುಕೊಂಡು ಹೋಗಿ ಹಿಂದಿನ ಪ್ರಕರಣವನ್ನು ಹಿಂಪಡೆಯುವಂತೆ ಬೆದರಿಕೆ ಹಾಕಿದ್ದರು ಎಂದು ಮಹಿಳೆ ಆರೋಪಿಸಿದ್ದಾರೆ. ದೂರಿನಲ್ಲಿನ ಆರೋಪಗಳ ಆಧಾರದ ಮೇಲೆ ಪ್ರಕರಣ ದಾಖಲಿಸಿರುವ ಪೊಲೀಸರು ದಾಖಲೆಗಳನ್ನು ಎಸ್‌ಐಡಿಗೆ ಹಸ್ತಾಂತರಿಸಿದ್ದು, ಮುಂದಿನ ತನಿಖೆ ನಡೆಯುತ್ತಿದೆ.

# ಭಾರತ್ ಜೋಡೋ ಯಾತ್ರೆಯಿಂದ ಜನರ ಸಮಸ್ಯೆಗಳಿಗೆ ಸ್ಪಂದನೆ: ಡಿ.ಕೆ.ಶಿವಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ಭಾರತ್ ಜೋಡೋ ಯಾತ್ರೆ ದೇಶದ ಯುವಕರು, ಮಹಿಳೆಯರು, ರೈತರು ಹಾಗೂ ಬಡವರ ಸಮಸ್ಯೆಗಳನ್ನು ಆಲಿಸಿ, ಜನಸಾಮಾನ್ಯರ ಸಂಕಷ್ಟಗಳಿಗೆ ಪರಿಹಾರ ಕಂಡುಕೊಳ್ಳಲು ದಾರಿ ತೋರಿಸಿತು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.


ಕೆಪಿಸಿಸಿ ಕಚೇರಿಯ ಭಾರತ್ ಜೋಡೋ ಸಭಾಂಗಣದಲ್ಲಿ ನಡೆದ ಯಾತ್ರೆಯ ಐದನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾರತ್ ಜೋಡೋ ಯಾತ್ರೆ ಕೇವಲ ಕಾಂಗ್ರೆಸ್ ಕಾರ್ಯಕ್ರಮವಲ್ಲ.

ದೇಶದ ಐಕ್ಯತೆ ಮತ್ತು ಸಮಗ್ರತೆಗಾಗಿ ನಡೆದ ಅಭಿಯಾನವಾಗಿದ್ದು, ಕರ್ನಾಟಕದಲ್ಲಿ 21 ದಿನಗಳ ಕಾಲ 511 ಕಿ.ಮೀ. ಸಾಗಿತ್ತು. ಚಾಮರಾಜನಗರದಿಂದ ರಾಯಚೂರಿನವರೆಗೆ ಯಾತ್ರೆ ನಡೆದ ಎಲ್ಲ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದೆ ಎಂದರು.

ಯಾತ್ರೆಯ ಸಂದರ್ಭದಲ್ಲಿ ವಿವಿಧ ವರ್ಗಗಳ ಜನರೊಂದಿಗೆ ರಾಹುಲ್ ಗಾಂಧಿ ಸಂವಾದ ನಡೆಸಿ ಅವರ ಸಮಸ್ಯೆಗಳನ್ನು ಅರಿತುಕೊಂಡರು. ಚಾಲಕರು, ರೈತರು, ನೇಕಾರರು, ಯುವಕರು, ಮಹಿಳೆಯರು ಹಾಗೂ ವಿದ್ಯಾರ್ಥಿಗಳೊಂದಿಗೆ ನಡೆದ ಸಂವಾದವೇ ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ರೂಪಿಸುವಿಕೆಗೆ ಅಡಿಪಾಯವಾಯಿತು ಎಂದು ಶಿವಕುಮಾರ್ ತಿಳಿಸಿದರು.

ಭಾರತ್ ಜೋಡೋ ಯಾತ್ರೆಯ ಆಶಯವನ್ನು ಮುಂದುವರಿಸಲು ರಾಜ್ಯದಲ್ಲಿ 16ರಿಂದ 35 ವರ್ಷದ ಯುವಕರಿಗಾಗಿ 10 ಸಾವಿರ ಭಾರತ್ ಜೋಡೋ ಯುವಕರ ಸಂಘಗಳನ್ನು ರಚಿಸಲಾಗುತ್ತಿದೆ. ಆನ್‌ಲೈನ್‌ನಲ್ಲಿ ಈಗಾಗಲೇ ಲಕ್ಷಾಂತರ ಯುವಕರು ನೋಂದಾಯಿಸಿಕೊಂಡಿದ್ದು, ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆ, ಪ್ರತಿಭಾ ಅನಾವರಣ ಹಾಗೂ ಸಾಮಾಜಿಕ ಸಾಮರಸ್ಯಕ್ಕೆ ಒತ್ತು ನೀಡಲಾಗುವುದು ಎಂದರು.

ಕಾಂಗ್ರೆಸ್ ಕಾರ್ಯಕರ್ತರಿಗೆ ಮತ್ತಷ್ಟು ಶಕ್ತಿ ತುಂಬಲು ಪ್ರತಿ ಪಂಚಾಯಿತಿಯಲ್ಲಿ ಗ್ಯಾರಂಟಿ ಸಮಿತಿ ರಚಿಸಲು ಸೂಚಿಸಲಾಗಿದೆ. ಯುವಜನರಿಗಾಗಿ 72 ಸಾವಿರ ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನೂ ಸರ್ಕಾರ ಕೈಗೊಂಡಿದೆ ಎಂದು ಹೇಳಿದರು.



**2028, 2029ರಲ್ಲೂ ನಮ್ಮದೇ ಸರ್ಕಾರ**

2028ರ ವಿಧಾನಸಭಾ ಚುನಾವಣೆಯಲ್ಲೂ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲಿದೆ. 2029ರಲ್ಲೂ ನಮ್ಮದೇ ಸರ್ಕಾರ ಇರಲಿದೆ ಎಂದು ಡಿ.ಕೆ.ಶಿವಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.

ಇತ್ತೀಚಿನ ವಿಧಾನಪರಿಷತ್ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್‌ನ 12 ಶಾಸಕರು ಅಡ್ಡಮತದಾನ ಮಾಡಿರುವುದು ಆ ಪಕ್ಷಗಳ ಮೇಲಿನ ಅಸಮಾಧಾನವನ್ನು ತೋರಿಸುತ್ತದೆ ಎಂದು ಅವರು ಹೇಳಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ಇರುವ ಹಿನ್ನೆಲೆಯಲ್ಲಿ ಸರ್ಕಾರದ 100 ದಿನಗಳ ಕಾರ್ಯಕ್ರಮವನ್ನು ಸರಳವಾಗಿ ನಡೆಸಲಾಗುತ್ತಿದೆ. ಬಿಜೆಪಿ ಎಷ್ಟೇ ಯಾತ್ರೆ ಹಾಗೂ ರಾಜಕೀಯ ಷಡ್ಯಂತ್ರ ನಡೆಸಿದರೂ ಕಾಂಗ್ರೆಸ್ ಅದನ್ನು ಎದುರಿಸುವ ಶಕ್ತಿ ಹೊಂದಿದೆ ಎಂದು ಶಿವಕುಮಾರ್ ಹೇಳಿದರು.

## "ನಾನು ಬೆದರಿಕೆಗೆ ಹೆದರುವುದಿಲ್ಲ"

"ಅಮೆರಿಕದಿಂದ ಬಂದು ಮಾಧ್ಯಮಗೋಷ್ಠಿ ನಡೆಸಿ ದೇಶದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸುತ್ತೇನೆ ಎಂದು [ಎಚ್.ಡಿ. ಕುಮಾರ ಸ್ವಾಮಿ] ಹೇಳಿದ್ದಾರೆ. ಈ ಡಿ ಕೆ ಶಿವಕುಮಾರ್, ಈ ಸರ್ಕಾರ ಇದಕ್ಕೆಲ್ಲಾ ಹೆದರುವುದಿಲ್ಲ. ರಾಹುಲ್ ಗಾಂಧಿ ಅನ್ಯಾಯ ಪ್ರಶ್ನೆ ಮಾಡಿದ್ದಕ್ಕೆ ಕೇಸ್ ಹಾಕಿದ್ದಾರೆ. ಅವರು ಇದಕ್ಕೆ ಹೆದರುತ್ತಾರಾ? ಇಂತಹ ಪರಿಸ್ಥಿತಿಯಲ್ಲಿ ನಾವು ನಿಮ್ಮ ಬ್ಲಾಕ್ ಮೇಲೆ ಗೆ ಹೆದರುವುದಿಲ್ಲ. ಇಲ್ಲಿ ಇರುವುದು ನಾನು ಮಾತ್ರವಲ್ಲ. ನಮ್ಮ ಹಿಂದೆ ಈ ಕಾರ್ಯಕರ್ತರ ಸೈನ್ಯವೇ ಇದೆ. ನಾವು ನೀವೆಲ್ಲ ಸೇರಿ ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರ ಕೈ ಬಲಪಡಿಸೋಣ" ಎಂದರು.

"ನಾನು, ಹರಿಪ್ರಸಾದ್, ಸಿದ್ದರಾಮಯ್ಯ ಅವರು ಸೇರಿದಂತೆ ಕಾಂಗ್ರೆಸ್ ಪಕ್ಷದ ಸಚಿವರು ನಾಯಕರು ಎಲ್ಲರೂ ಒಟ್ಟಾಗಿ ಕಾಂಗ್ರೆಸ್ ಪಕ್ಷದ ಸಿದ್ಧಾಂತ, ಎಲ್ಲಾ ವರ್ಗವನ್ನು ಒಗ್ಗೂಡಿಸೋಣ. ಕಾಂಗ್ರೆಸ್ ಪಕ್ಷವನ್ನು ಮತ್ತೆ ದೇಶದಲ್ಲಿ ಅಧಿಕಾರಕ್ಕೆ ತರೋಣ" ಎಂದು ಕರೆ ನೀಡಿದರು.

# ಮೋಡರಹಿತ ಆಕಾಶ; ಮುಂಗಾರು ಇನ್ನೂ ಹಿಂದೆ ಸರಿದಿಲ್ಲ

● ವಿಕ್ರಮ ವಾಹಿನಿ । ಬೆಂಗಳೂರು

ಇತ್ತೀಚಿನ ಉಪಗ್ರಹ ಚಿತ್ರಗಳಲ್ಲಿ ಭಾರತ ಬಹುತೇಕ ಮೋಡರಹಿತವಾಗಿ ಕಾಣುತ್ತಿದೆ. ವಿಶೇಷವಾಗಿ ವಾಯುವ್ಯ ಮತ್ತು ಮಧ್ಯಭಾಗದ ಪ್ರದೇಶಗಳಲ್ಲಿ ಮೋಡಗಳು ತೀವ್ರವಾಗಿ ಕಡಿಮೆಯಾಗಿವೆ. ಇದನ್ನು ನೋಡಿ ಮುಂಗಾರು ಹಿಂದೆ ಸರಿಯುತ್ತಿದೆಯೇ ಎಂಬ ಆತಂಕ ವ್ಯಕ್ತವಾಗುತ್ತಿದೆ.

ಆದರೆ ಮೋಡಗಳು ಕಡಿಮೆಯಾಗಿದ್ದರೂ ಅಧಿಕೃತವಾಗಿ ಮುಂಗಾರು ಇನ್ನೂ ಹಿಂದೆ ಸರಿದಿಲ್ಲ. ಉಪಗ್ರಹ ಚಿತ್ರಗಳಲ್ಲಿ ಭಾರತದ ವಿಶಾಲ ಪ್ರದೇಶಗಳಲ್ಲಿ ಮೋಡಗಳು ಗಮನಾರ್ಹವಾಗಿ ಕಡಿಮೆಯಾಗಿರುವುದು ಕಂಡುಬಂದಿದೆ. ಈ ಬದಲಾವಣೆ ಕೇವಲ ಭಾರತಕ್ಕೆ ಸೀಮಿತವಲ್ಲ. ಅರೇಬಿಯನ್ ಸಮುದ್ರದಿಂದ ಪಶ್ಚಿಮ ಪೆಸಿಫಿಕ್ ಸಾಗರದವರೆಗೆ ವ್ಯಾಪಕ ಪ್ರದೇಶದಲ್ಲಿ ಮೋಡಗಳು ಕಡಿಮೆಯಾಗಿವೆ. ಚೀನಾ, ಇಂಡೋನೇಷ್ಯಾ, ಸುಮಾತ್ರಾ ಸೇರಿದಂತೆ ದಕ್ಷಿಣ ಮತ್ತು ಪೂರ್ವ ಏಷ್ಯಾದ ಹಲವು ಭಾಗಗಳಲ್ಲೂ ಇದೇ ಪರಿಸ್ಥಿತಿ ಕಂಡುಬಂದಿದೆ.

ಈ ವ್ಯಾಪಕ ಮೋಡ ಕಡಿತಕ್ಕೆ ಬಲವಾದ ಎಲ್ ನಿನೊದ ಪ್ರಭಾವವೇ ಮುಖ್ಯ ಕಾರಣವೆಂದು ಹೇಳಲಾಗುತ್ತಿದೆ. ಎಲ್ ನಿನೊದಿಂದಾಗಿ ವಾತಾವರಣದ ಪರಿಚಲನೆ ಬದಲಾಗುತ್ತಿದ್ದು, ಮಾನ್ಸೂನ್ ಚಟುವಟಿಕೆಗೆ ಪರಿಣಾಮ ಬೀರುತ್ತಿದೆ.

ಆದರೆ ಆಕಾಶದಲ್ಲಿ ಸ್ಪಷ್ಟ ಮೋಡಗಳನ್ನು ಗಮನಿಸಿದಾಗ ಕಾಣುವುದರಿಂದ ಮುಂಗಾರು ಅಧಿಕೃತವಾಗಿ ಹಿಂದೆ ಸರಿದಿದೆ ಎನ್ನಲಾಗುವುದಿಲ್ಲ, ಸೆಪ್ಟೆಂಬರ್ 15ರ ನಂತರ ಮುಂಗಾರು ಹಿಂದೆ ಸರಿಯುವ ಪ್ರಕ್ರಿಯೆ ಪ್ರಾರಂಭವಾಗುವ ಸಾಧ್ಯತೆ ಇದೆ. ಇದು ಮೊದಲು ವಾಯುವ್ಯ ಭಾರತದಿಂದ ಆರಂಭವಾಗುತ್ತದೆ.



ಹವಾಮಾನ ಮಾದರಿಗಳ ಪ್ರಕಾರ, ಸೆಪ್ಟೆಂಬರ್ ಎರಡನೇ ಅರ್ಧದಲ್ಲಿ ಮುಂಗಾರು ಹಿಂದೆ ಸರಿಯಲು ಅನುಕೂಲಕರ ವಾತಾವರಣ ಸೃಷ್ಟಿಯಾಗುತ್ತಿದೆ. ಯುರೋಪಿಯನ್ ಸೆಂಟರ್ ಫಾರ್ ಮೀಡಿಯಂ-ರೇಂಜ್ ವೆದರ್ ಫೋರ್‌ಕ್ಯಾಸ್ಟ್ ಮತ್ತು ಗ್ಲೋಬಲ್ ಫೋರ್‌ಕ್ಯಾಸ್ಟ್ ಸಿಸ್ಟಮ್ ಮಾದರಿಗಳ ಪ್ರಕಾರ, ವಾಯುವ್ಯ ಭಾರತದ ಮೇಲೆ ಮುಂಗಾರು ಹಿಂದೆ ಸರಿಯುವ ಆಂಟಿಸೈಕ್ಲೋನ್ ಕ್ರಮೇಣ ಬಲಗೊಳ್ಳಲಿದೆ. ಈ ಆಂಟಿಸೈಕ್ಲೋನ್ ಸೆಪ್ಟೆಂಬರ್ 21ರ ಸುಮಾರಿಗೆ ಪೂರ್ಣವಾಗಿ ಬಲಗೊಂಡು, ಮುಂಗಾರು ಹಿಂದೆ ಸರಿಯುವುದು ಸ್ಪಷ್ಟವಾಗುತ್ತದೆ.

ಇದು ಭಾರತದ ವಾರ್ಷಿಕ ಹವಾಮಾನ ಚಕ್ರದಲ್ಲಿ ಮುಖ್ಯ ಹಂತ. ವಾಯುವ್ಯ ಭಾರತದಿಂದ ಮುಂಗಾರು ಹಿಂದೆ ಸರಿದಂತೆ, ಆ ಪ್ರದೇಶಗಳಲ್ಲಿ ಮಳೆ ಕಡಿಮೆಯಾಗುತ್ತದೆ. ಆಕಾಶ ಸ್ಪಷ್ಟವಾಗುತ್ತದೆ, ತೇವಾಂಶ ಕಡಿಮೆಯಾಗುತ್ತದೆ. ಅಲ್ಲದೆ ಒಣಹವೆ ಹೆಚ್ಚಾಗುತ್ತದೆ.

ಸದ್ಯಕ್ಕೆ, ಉಪಗ್ರಹದಿಂದ ಕಾಣುವ ಬಹುತೇಕ ಮೋಡರಹಿತ ಚಿತ್ರಗಳನ್ನು ಗಮನಿಸಿದರೆ, ಭಾರತದ ಮುಂಗಾರು ದುರ್ಬಲವಾಗುತ್ತಿರುವ ಸಂಕೇತವೇ ಹೊರತು, ಅಧಿಕೃತವಾಗಿ ಮುಗಿದಿದೆ ಎಂದಲ್ಲ.

ಮುಂದಿನ ಕೆಲವು ದಿನಗಳಲ್ಲಿ ವಾತಾವರಣದ ಪರಿಸ್ಥಿತಿ ಹೇಗೆ ಬದಲಾಗುತ್ತದೆ ಎಂಬುದರ ಮೇಲೆ ಅಧಿಕೃತವಾಗಿ ಮುಂಗಾರು ಹಿಂದೆ ಸರಿಯುವಿಕೆ ಅವಲಂಬಿತವಾಗಿದೆ. ಸೆಪ್ಟೆಂಬರ್ ಎರಡನೇವಾರದ ಬಳಿಕ ಕರ್ನಾಟಕ ಸೇರಿದಂತೆ ದಕ್ಷಿಣದ ರಾಜ್ಯಗಳಲ್ಲಿ ಮತ್ತೆ ಮಳೆ ಚಟುವಟಿಕೆಗಳು ಚುರುಕುಗೊಳ್ಳುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ಮುಯನ್ಸೂಚನೆ ನೀಡಿದೆ.

# ಗಣೇಶ ಚತುರ್ಥಿಗೆ ಬೆಂಗಳೂರು-ಬೆಳಗಾವಿ ನಡುವೆ ವಿಶೇಷ ರೈಲು

● ವಿಕ್ರಮ ವಾಹಿನಿ । ಹುಬ್ಬಳ್ಳಿ

ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ನಿವಾರಿಸಲು ನೈಋತ್ಯ ರೈಲ್ವೆ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ (ಎಸ್‌ಎಂವಿಟಿ) ಬೆಂಗಳೂರು-ಬೆಳಗಾವಿ ನಡುವೆ ಎರಡು ಜೋಡಿ ವಿಶೇಷ ರೈಲುಗಳನ್ನು ಓಡಿಸಲಿದೆ.



ರೈಲು ಸಂಖ್ಯೆ 06563 ಎಸ್‌ಎಂವಿಟಿ ಬೆಂಗಳೂರು-ಬೆಳಗಾವಿ ವಿಶೇಷ ರೈಲು ಸೆ.11ರಂದು ಸಂಜೆ 7 ಗಂಟೆಗೆ ಬೆಂಗಳೂರಿನಿಂದ ಹೊರಟು ಮರುದಿನ ಬೆಳಿಗ್ಗೆ 8.25ಕ್ಕೆ ಬೆಳಗಾವಿ ತಲುಪಲಿದೆ. ಮರು ಪ್ರಯಾಣದಲ್ಲಿ ರೈಲು ಸಂಖ್ಯೆ 06564 ಸೆ.12ರಂದು ಸಂಜೆ 5.30ಕ್ಕೆ ಬೆಳಗಾವಿಯಿಂದ ಹೊರಟು ಸೆ.13ರಂದು ಬೆಳಿಗ್ಗೆ 5 ಗಂಟೆಗೆ ಎಸ್‌ಎಂವಿಟಿ ಬೆಂಗಳೂರು ತಲುಪಲಿದೆ.

ಎರಡನೇ ಜೋಡಿ ರೈಲುಗಳಲ್ಲಿ 06583 ಬೆಂಗಳೂರು-ಬೆಳಗಾವಿ ವಿಶೇಷ ರೈಲು ಸೆ.13ರಂದು ಸಂಜೆ 7 ಗಂಟೆಗೆ ಬೆಂಗಳೂರಿನಿಂದ ಹೊರಟು ಸೆ.14ರಂದು ಬೆಳಿಗ್ಗೆ 8.25ಕ್ಕೆ ಬೆಳಗಾವಿ ತಲುಪಲಿದೆ. 06584 ಬೆಳಗಾವಿ-ಬೆಂಗಳೂರು ವಿಶೇಷ ರೈಲು ಸೆ.14ರಂದು ಸಂಜೆ 5.30ಕ್ಕೆ ಬೆಳಗಾವಿಯಿಂದ ಹೊರಟು ಸೆ.15ರಂದು ಬೆಳಿಗ್ಗೆ 5 ಗಂಟೆಗೆ ಬೆಂಗಳೂರಿಗೆ ಆಗಮಿಸಲಿದೆ.

ಎರಡೂ ರೈಲುಗಳು ಚಿಕ್ಕಬಾಣಾವರ, ತುಮಕೂರು, ಅರಸೀಕೆರೆ, ಬೀರೂರು, ದಾವಣಗೆರೆ, ಹರಿಹರ, ಹಾವೇರಿ, ಹುಬ್ಬಳ್ಳಿ, ಧಾರವಾಡ, ಅಲ್ನಾವರ, ಲೊಂಡಾ ಮತ್ತು ಖಾನಾಪುರ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಲಿವೆ.

ವಿಶೇಷ ರೈಲುಗಳಲ್ಲಿ 1 ಫಸ್ಟ್ ಕ್ಲಾಸ್ ಎಸಿ, 1 ಎಸಿ 2-ಟೈರ್, 3 ಎಸಿ 3-ಟೈರ್, 9 ಸ್ಲೀಪರ್, 4 ಸಾಮಾನ್ಯ ದ್ವಿತೀಯ ದರ್ಜೆ ಹಾಗೂ 2 ಎಸ್‌ಎಲ್‌ಆರ್‌ಡಿ ಕೋಚ್‌ಗಳು ಸೇರಿದಂತೆ ಒಟ್ಟು 20 ಕೋಚ್‌ಗಳು ಇರಲಿವೆ ಎಂದು ನೈಋತ್ಯ ರೈಲ್ವೆ ಪ್ರಕಟಣೆಯಲ್ಲಿ ತಿಳಿಸಿದೆ.

# ಈಶ್ವರ ಖಂಡ್ರೆ ಭೇಟಿ ಬೆನ್ನಲ್ಲೇ ಹಿರೇಹಳ್ಳಿ ಕೆರೆ ಒತ್ತುವರಿ ತೆರವು

● ವಿಕ್ರಮ ವಾಹಿನಿ । ಬೆಂಗಳೂರು

ಅರಣ್ಯ ಒತ್ತುವರಿದಾರರಿಗೆ ಸಿಂಹಸ್ವಪ್ನವಾಗಿದ್ದ ಈಶ್ವರ ಖಂಡ್ರೆ, ಈಗ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿ ಗ್ರಾ.ಪಂ.ಗೆ ಸೇರಿದ ಕೆರೆ ಒತ್ತುವರಿ ತೆರವಿಗೆ ಆದೇಶಿಸಿದ್ದು, ಇಂದು ತುಮಕೂರು, ಹಿರೇಹಳ್ಳಿಯ ಒತ್ತುವರಿ ಪ್ರದೇಶದ ತೆರವು ಕಾರ್ಯಾಚರಣೆ ನಡೆಯುತ್ತಿದೆ.

ರಾಜ್ಯದಲ್ಲಿ ಗ್ರಾ.ಪಂ.ಗೆ ಸೇರಿದ 32504 ಕೆರೆಗಳ ಪೈಕಿ ತೆರವಾಗದೆ ಉಳಿದಿರುವ 4828 ಕೆರೆಗಳ 11671 ಎಕರೆ ಒತ್ತುವರಿಯನ್ನು ನಿಯಮಾನುಸಾರ ತೆರವು ಮಾಡುವಂತೆ ಇತ್ತೀಚೆಗಷ್ಟೇ ಸಚಿವರು ಆದೇಶ ನೀಡಿದ್ದರು. ಬಳಿಕ ಸೆ.5ರಂದು ತುಮಕೂರು ಗ್ರಾಮಾಂತರ ಜಿಲ್ಲೆ ಊರ್ಡಿಗೆರೆ ಹೋಬಳಿ ಹಿರೇಹಳ್ಳಿ ಕೆರೆ ಪ್ರದೇಶಕ್ಕೆ ಖುದ್ದು ಭೇಟಿ ನೀಡಿ ಒತ್ತುವರಿ ತೆರವಿಗೆ ಸೂಚನೆ ನೀಡಿದ್ದರು.



ಸಚಿವರ ಭೇಟಿ ಹಾಗೂ ಆದೇಶದ ಬೆನ್ನಲ್ಲೆ ಪಂಚಾಯತಿ ಅಧಿಕಾರಿಗಳು, ಸರ್ವೆ ನಂ.118ರಲ್ಲಿರುವ 17.32 ಎಕರೆ ಕೆರೆ ಅಂಗಳದ ಪೈಕಿ ಒತ್ತುವರಿಯಾಗಿರುವ ಪ್ರದೇಶವನ್ನು ಭೂಮಾಪಕರ ನೆರವಿನಿಂದ ಗುರುತಿಸಿ, ತೆರವು ಮಾಡಿ, ಗಡಿ ಗುರುತಿಸಿ ಹದ್ದುಬಸ್ತು ಮಾಡಲು ಮುಂದಾಗಿದ್ದಾರೆ.

ಜೆಸಿಬಿ ವಾಹನಗಳ ಜೊತೆ ಕಾರ್ಯಾಚರಣೆಗಿಳಿದಿರುವ ಪಂಚಾಯತಿ ಅಧಿಕಾರಿ, ಸಿಬ್ಬಂದಿ, ಅಕ್ರಮವಾಗಿ ಕೆರೆಗೆ ಮಣ್ಣು ತುಂಬಿ ಒತ್ತುವರಿ ಮಾಡಿದ್ದ ಸುಮಾರು 28 ಗುಂಟೆ ತೆರವು ಮಾಡಿಸಿದ್ದು, ಕೆರೆಯ ಹೆಚ್ಚಿನ ಭೂಮಿ ಸಾರ್ವಜನಿಕ ರಸ್ತೆಯಾಗಿ ಬಳಕೆಯಾಗುತ್ತಿರುವುದನ್ನು ಗುರುತಿಸಿದ್ದಾರೆ. ಕೆರೆಯ ಉಳಿಕೆ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿಯಲಿದೆ. ಸಂಪೂರ್ಣ 17.32 ಎಕರೆ ಕೆರೆಗೂ ಗಡಿ ಗುರುತು ಮಾಡುವ ಕಾರ್ಯ ಪ್ರಗತಿಯಲ್ಲಿದ್ದು, ಇದು ರಾಜ್ಯದ ಇತರೆ ಕೆರೆ ಒತ್ತುವರಿದಾರರಿಗೂ ಎಚ್ಚರಿಕೆಯ ಗಂಟೆಯಾಗಿದೆ.

# ಸತೀಶ್ ಜಾರಕಿಹೊಳಿ ಆಪ್ತರ ನಿವಾಸ, ಕಚೇರಿಗಳ ಮೇಲೆ ಇಡಿ ದಾಳಿ

● ವಿಕ್ರಮ ವಾಹಿನಿ । ಬೆಂಗಳೂರು

ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ (ಫೆಮಾ) ಹಾಗೂ ಅಕ್ರಮ ಹಣ ವರ್ಗಾವಣೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಅವರ ಕುಟುಂಬದವರಿಗೆ ಸಂಬಂಧಿಸಿದ ಬೆಂಗಳೂರು, ಬೆಳಗಾವಿ, ಮಹಾರಾಷ್ಟ್ರ ಸೇರಿದಂತೆ 18ಕ್ಕೂ ಹೆಚ್ಚು ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ಬುಧವಾರ ಮುಂಜಾನೆ ಏಕಕಾಲದಲ್ಲಿ ದಾಳಿ ನಡೆಸಿದರು.

ಡಾಲರ್ಸ್ ಕಾಲೋನಿಯಲ್ಲಿರುವ ಸಚಿವರ ನಿವಾಸ, ಸರ್ಕಾರಿ ನಿವಾಸ ಹಾಗೂ ಬೆಳಗಾವಿಯ ನಿವಾಸ ಸೇರಿದಂತೆ ಬೆಂಗಳೂರಿನ ಆರು ಸ್ಥಳಗಳಲ್ಲಿ ಇಡಿ ಅಧಿಕಾರಿಗಳು ಶೋಧ ನಡೆಸಿದರು. ಸಚಿವ ಸತೀಶ್ ಜಾರಕಿಹೊಳಿ ಹಾಗೂ ಅವರ ಪುತ್ರಿ, ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಸ್ಥಳಗಳಲ್ಲೂ ದಾಖಲೆಗಳ ಪರಿಶೀಲನೆ ನಡೆಸಲಾಗಿದೆ ಎಂದು ತಿಳಿದುಬಂದಿದೆ.



ಅಕ್ರಮ ಹಣ ವರ್ಗಾವಣೆ ಹಾಗೂ ವಿದೇಶಿ ಹೂಡಿಕೆಗಳಿಗೆ ಸಂಬಂಧಿಸಿದ ಆರೋಪಗಳ ಹಿನ್ನೆಲೆಯಲ್ಲಿ ಕಾರ್ಯಾಚರಣೆ ನಡೆಸಲಾಗಿದೆ ಎಂದು ಇಡಿ ಮೂಲಗಳು ತಿಳಿಸಿವೆ. ಆಸ್ತಿ-ಪಾಸ್ತಿ ದಾಖಲೆಗಳು, ಬ್ಯಾಂಕ್ ಖಾತೆಗಳು ಹಾಗೂ ಹಣಕಾಸು ವ್ಯವಹಾರಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.

ಇಡಿ ಪ್ರಾಥಮಿಕ ತನಿಖೆಯಲ್ಲಿ ಅಬಕಾರಿ ವಲಯದಲ್ಲಿ ರೂ 178 ಕೋಟಿಗೂ ಅಧಿಕ ಮೊತ್ತದ ಅಕ್ರಮ ವ್ಯವಹಾರದ ಸುಳಿವು ಹಾಗೂ ವಿದೇಶಿ ಹಣ ವರ್ಗಾವಣೆಯ ಶಂಕೆ ವ್ಯಕ್ತವಾಗಿದೆ ಎಂದು ಮೂಲಗಳು ತಿಳಿಸಿವೆ. ಈ ಆರೋಪಗಳ ಕುರಿತು ತನಿಖೆ ಮುಂದುವರಿದಿದೆ.

**ಮಂಜುನಾಥ್ ಮನೆ, ಕಚೇರಿಗಳಲ್ಲೂ ಶೋಧ**

ಸಚಿವರ ಆಪ್ತ ಹಾಗೂ ಬೆಳಗಾವಿ ವಲಯದ ಅಬಕಾರಿ ಹೆಚ್ಚುವರಿ ಆಯುಕ್ತ ವೈ. ಮಂಜುನಾಥ್ ಅವರಿಗೆ ಸಂಬಂಧಿಸಿದ ಮನೆ ಮತ್ತು ಕಚೇರಿಗಳ ಮೇಲೂ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಗೋವಾದಲ್ಲಿರುವ ಅವರ ಸಂಬಂಧಿತ ಸ್ಥಳಗಳಲ್ಲೂ ಶೋಧ ನಡೆಸಲಾಗಿದೆ ಎಂದು ತಿಳಿದುಬಂದಿದೆ.

ಈ ಹಿಂದೆ ಜೂನ್ 24ರಂದು ಮಂಜುನಾಥ್ ಅವರ ನಿವಾಸ ಮತ್ತು ಕಚೇರಿಗಳ ಮೇಲೆ ಇಡಿ ದಾಳಿ ನಡೆಸಿತ್ತು. ಆಗ ರೂ 5.5 ಕೋಟಿ ನಗದು, ರೂ 7.8 ಕೋಟಿ ಮೌಲ್ಯದ ಚಿನ್ನಾಭರಣ ಹಾಗೂ ರೂ 3.3 ಲಕ್ಷ ಮೌಲ್ಯದ ವಿವಿಧ ದೇಶಗಳ ವಿದೇಶಿ ಕರೆನ್ಸಿ ಸೇರಿದಂತೆ ಹಲವು ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿತ್ತು ಎಂದು ಅಧಿಕಾರಿಗಳ ಮೂಲಗಳು ತಿಳಿಸಿವೆ.


ಬುಧವಾರದ ಕಾರ್ಯಾಚರಣೆಯಲ್ಲಿ 25ಕ್ಕೂ ಹೆಚ್ಚು ಅಧಿಕಾರಿಗಳು ಭಾಗವಹಿಸಿದ್ದು, ಮುಂಜಾನೆ 7 ಗಂಟೆ ಸುಮಾರಿಗೆ ಹಲವು ಸ್ಥಳಗಳಲ್ಲಿ ಏಕಕಾಲಕ್ಕೆ ಶೋಧ ಆರಂಭಿಸಿದರು. ಸಚಿವ ಸತೀಶ್ ಜಾರಕಿಹೊಳಿ ಬೆಂಗಳೂರಿನ ಸರ್ಕಾರಿ ನಿವಾಸದಲ್ಲೇ ಇದ್ದು, ಅಧಿಕಾರಿಗಳು ಅವರನ್ನು ಹಾಗೂ ಸಿಬ್ಬಂದಿಯನ್ನು ವಿಚಾರಣೆಗೆ ಒಳಪಡಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಮೋದಿ ಜನಸೇವೆಗೆ 25 ವರ್ಷ: ಸೇವಾ ಅಭಿಯಾನ

● ವಿಕ್ರಮ ವಾಹಿನಿ । ನವದೆಹಲಿ

ಪ್ರಧಾನಿ ನರೇಂದ್ರ ಮೋದಿ ಅವರ ಸಾರ್ವಜನಿಕ ಜೀವನಕ್ಕೆ 25 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಬಿಜೆಪಿ ದೇಶಾದ್ಯಂತ 'ಸಂಕಲ್ಪ ಸೇವಾ' ಅಭಿಯಾನ ಹಮ್ಮಿಕೊಳ್ಳಲಿದೆ ಎಂದು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವೀನ್ ತಿಳಿಸಿದ್ದಾರೆ.

ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೋದಿ ಅವರ 25 ವರ್ಷಗಳ ಸಾರ್ವಜನಿಕ ಬದುಕು ದೇಶಸೇವೆ ಹಾಗೂ ಅಭಿವೃದ್ಧಿಗೆ ಸಮರ್ಪಿತವಾಗಿದೆ. ಅವರ ನಾಯಕತ್ವದಲ್ಲಿ ದೇಶದಲ್ಲಿ ಹಲವು ಕ್ಷೇತ್ರಗಳಲ್ಲಿ ಬದಲಾವಣೆಗಳಾಗಿದ್ದು, ಭಾರತ ಜಾಗತಿಕ ಮಟ್ಟದಲ್ಲಿ ತನ್ನ ಪ್ರಭಾವ ಹಾಗೂ ವಿಶ್ವಾಸಾರ್ಹತೆಯನ್ನು ಹೆಚ್ಚಿಸಿಕೊಂಡಿದೆ ಎಂದು ಹೇಳಿದರು.



ಮೋದಿ ನೇತೃತ್ವದ ಸರ್ಕಾರದ ಅವಧಿಯಲ್ಲಿ ಸುಮಾರು 25 ಕೋಟಿ ಜನರನ್ನು ಬಡತನ ರೇಖೆಯಿಂದ ಹೊರತರಲಾಗಿದೆ ಎಂದು ನಿತಿನ್ ನವೀನ್ ಪ್ರತಿಪಾದಿಸಿದರು. ಬಡವರು ಸೇರಿದಂತೆ ಸಮಾಜದ ವಿವಿಧ ವರ್ಗಗಳ ಜೀವನಮಟ್ಟ ಸುಧಾರಿಸಲು ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ. ದೇಶದಲ್ಲಿ ಭದ್ರತೆ ಹಾಗೂ ಅಭಿವೃದ್ಧಿಯ ವಾತಾವರಣ ನಿರ್ಮಾಣವಾಗಿದ್ದು, ಭಾರತದ ಗೌರವ ಜಾಗತಿಕ ಮಟ್ಟದಲ್ಲಿ ಹೆಚ್ಚಿದೆ ಎಂದು ಅವರು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನವಾದ ಸೆಪ್ಟೆಂಬರ್ 17ನ್ನು ಬಿಜೆಪಿ 'ಸೇವಾ ದಿನ'ವಾಗಿ ಆಚರಿಸಲಿದೆ. ಪಕ್ಷದ ಕಾರ್ಯಕರ್ತರು ಪ್ರಧಾನಿಗೆ ಕೃತಜ್ಞತೆ ಸಲ್ಲಿಸುವುದರ ಜತೆಗೆ ವಿವಿಧ ಸೇವಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಸೆ.17ರ ಸಂಜೆ 7 ಗಂಟೆಗೆ ದೇಶಾದ್ಯಂತ ದೀಪ ಬೆಳಗಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ನವೀನ್ ತಿಳಿಸಿದರು. ವಾರಾಣಸಿಯಿಂದ ವಡನಗರದವರೆಗೆ ನಡೆಯಲಿರುವ ಸೇವಾ ಅಭಿಯಾನ ಸುಮಾರು 20 ದಿನಗಳ ಕಾಲ ಮುಂದುವರಿಯಲಿದ್ದು, ಪ್ರತಿದಿನ ಐದರಿಂದ ಏಳು ಕಾರ್ಯಕ್ರಮಗಳನ್ನು ಆಯೋಜಿಸಲು ಪಕ್ಷ ಯೋಜಿಸಿದೆ. ಅಭಿಯಾನವು ದೇಶದ 10 ರಾಜ್ಯಗಳ ಮೂಲಕ ಸಾಗಲಿದೆ.

ಅಕ್ಟೋಬರ್ 17ರಂದು ಅಭಿಯಾನದ ಪ್ರಮುಖ ಕಾರ್ಯಕ್ರಮವಾಗಿ ಜನಪ್ರತಿನಿಧಿಗಳ ಸನ್ಮಾನ ಆಯೋಜಿಸಲಾಗುವುದು. ಗ್ರಾಮ ಪಂಚಾಯಿತಿಯಿಂದ ಸಂಸತ್‌ವರೆಗೆ ವಿವಿಧ ಹಂತಗಳಲ್ಲಿ ಸೇವೆ ಸಲ್ಲಿಸುತ್ತಿರುವ ಜನಪ್ರತಿನಿಧಿಗಳನ್ನು ಗೌರವಿಸಲು ಪಕ್ಷ ನಿರ್ಧರಿಸಿದೆ.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧವೂ ನಿತಿನ್ ನವೀನ್ ವಾಗ್ದಾಳಿ ನಡೆಸಿದರು. ಮೋದಿ ಸರ್ಕಾರದ ಅವಧಿಯಲ್ಲಿ ಯುವಜನರಿಗೆ ಹಲವು ಅವಕಾಶಗಳು ದೊರೆತಿದ್ದು, ಯುವಕರನ್ನು ಸಬಲೀಕರಣಗೊಳಿಸುವ ನಿಟ್ಟಿನಲ್ಲಿ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು. ಯುವಕರ ಧ್ವನಿಯನ್ನು ತಪ್ಪು ದಿಕ್ಕಿಗೆ ಕೊಂಡೊಯ್ಯುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

# 8 ತಿಂಗಳ ಬಳಿಕ ವಿದ್ಯಾರ್ಥಿನಿಯರ ಪತ್ತೆ

1ನೇ ಪುಟದಿಂದ

ಪ್ರಕರಣದ ತನಿಖೆ ಕೈಗೆತ್ತಿಕೊಂಡ ಸಿಐಡಿ ತಂಡ ಹಲವು ತಿಂಗಳಿನಿಂದ ವಿದ್ಯಾರ್ಥಿನಿಯರಿಗಾಗಿ ಹುಡುಕಾಟ ನಡೆಸಿತ್ತು. ತನಿಖೆ ವೇಳೆ ಅವರು ಮಲೆ ಮಹದೇಶ್ವರ ಬೆಟ್ಟಕ್ಕೆ ತೆರಳಿದ್ದ ಸುಳಿವು ದೊರೆತಿತ್ತು. ಅಲ್ಲಿನ ಮಾಹಿತಿ ಹಾಗೂ ಸಾಮಾಜಿಕ ಜಾಲತಾಣದಲ್ಲಿ ಲಭ್ಯವಾದ ಛಾಯಾಚಿತ್ರದ ಆಧಾರದ ಮೇಲೆ ತನಿಖೆ ಮುಂದುವರಿಸಿದರೂ ಸ್ಪಷ್ಟ ಸುಳಿವು ಸಿಕ್ಕಿರಲಿಲ್ಲ.

ಇತ್ತೀಚೆಗೆ ವಿದ್ಯಾರ್ಥಿನಿಯೊಬ್ಬರು ಹೊಸ ಸಿಮ್ ಕಾರ್ಡ್ ಪಡೆಯಲು ಆಧಾರ್ ಬಳಸಿದ್ದರಿಂದ ಅದರ ಮಾಹಿತಿ ಸರ್ವಿಸ್ ಪ್ರೊವೈಡರ್ ಮೂಲಕ ಸಿಐಡಿ ಅಧಿಕಾರಿಗಳಿಗೆ ಲಭ್ಯವಾಗಿದೆ. ಈ ಸುಳಿವಿನ ಆಧಾರದ ಮೇಲೆ ತನಿಖೆ ನಡೆಸಿದ ಅಧಿಕಾರಿಗಳು ಇಬ್ಬರೂ ವಿದ್ಯಾರ್ಥಿನಿಯರು ಇರುವ ಸ್ಥಳವನ್ನು ಪತ್ತೆಹಚ್ಚಿ ಅವರನ್ನು ವಶಕ್ಕೆ ಪಡೆದಿದ್ದಾರೆ.

ತನಿಖೆಯ ಪ್ರಕಾರ, ಮಲೆ ಮಹದೇಶ್ವರ ಬೆಟ್ಟದಲ್ಲಿದ್ದ ಸಂದರ್ಭದಲ್ಲಿ ವಿದ್ಯಾರ್ಥಿನಿಯೊಬ್ಬರಿಗೆ ಕನಕಪುರ ತಾಲೂಕಿನ ಯುವಕನ ಪರಿಚಯವಾಗಿತ್ತು. ಬಳಿಕ ಇಬ್ಬರೂ ಆತನೊಂದಿಗೆ ತೆರಳಿದ್ದರು ಎನ್ನಲಾಗಿದೆ. ನಂತರ ವಿದ್ಯಾರ್ಥಿನಿಯೊಬ್ಬರು ಆ ಯುವಕನನ್ನು ವಿವಾಹವಾಗಿದ್ದು, ಇಬ್ಬರೂ ಒಟ್ಟಿಗೆ ವಾಸಿಸುತ್ತಿದ್ದರು. ಮತ್ತೊಬ್ಬ ವಿದ್ಯಾರ್ಥಿನಿಯೂ ಅವರೊಂದಿಗೆ ವಾಸಿಸುತ್ತಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ.

# ವಿಜ್ಞಾನಿ-ವಿದ್ಯಾರ್ಥಿ ಸಂವಾದಕ್ಕೆ ಇಸ್ರೋ ಸಹಕಾರ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ವಿದ್ಯಾರ್ಥಿಗಳಿಗೆ ವಿಜ್ಞಾನವನ್ನು ಪಠ್ಯಪುಸ್ತಕದ ಆಚೆಗೆ ಅನುಭವಾತ್ಮಕವಾಗಿ ಪರಿಚಯಿಸುವ ಉದ್ದೇಶದಿಂದ ಕರ್ನಾಟಕದ ವಿವಿಧ ವಿಜ್ಞಾನ ಕೇಂದ್ರಗಳಲ್ಲಿ ಇಸ್ರೋ ವಿಜ್ಞಾನಿಗಳು ಹಾಗೂ ವಿದ್ಯಾರ್ಥಿಗಳ ನಡುವೆ ನೇರ ಸಂವಾದ ಕಾರ್ಯಕ್ರಮ ಆಯೋಜಿಸಲು ಸಹಕಾರ ನೀಡುವಂತೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರಂ ಸಿಂಗ್ ಮನವಿ ಮಾಡಿದ್ದಾರೆ.

ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಅವರನ್ನು ಭೇಟಿಯಾದ ಸಚಿವರು ಈ ಸಂಬಂಧ ಅಧಿಕೃತ ಮನವಿ ಸಲ್ಲಿಸಿದ್ದು, ಬಾಹ್ಯಾಕಾಶ ವಿಜ್ಞಾನ, ಸಂಶೋಧನೆ, ಉಪಗ್ರಹ ತಂತ್ರಜ್ಞಾನ ಹಾಗೂ ವಿಜ್ಞಾನ ಕ್ಷೇತ್ರದಲ್ಲಿನ ವೃತ್ತಿ ಅವಕಾಶಗಳ ಕುರಿತು ವಿದ್ಯಾರ್ಥಿಗಳು ವಿಜ್ಞಾನಿಗಳಿಂದ ನೇರವಾಗಿ ಮಾಹಿತಿ ಪಡೆಯುವ ವ್ಯವಸ್ಥೆ ರೂಪಿಸುವಂತೆ ಕೋರಿದ್ದಾರೆ. ವಿದ್ಯಾರ್ಥಿಗಳು ವಿಜ್ಞಾನಿಗಳೊಂದಿಗೆ ನೇರವಾಗಿ ಸಂವಾದ ನಡೆಸುವುದರಿಂದ ವಿಜ್ಞಾನ ಕೇವಲ ಪಠ್ಯ ವಿಷಯವಾಗಿ ಉಳಿಯದೆ, ಭವಿಷ್ಯದ ಅವಕಾಶಗಳ ಕ್ಷೇತ್ರವಾಗಿ ಕಾಣಲು ಸಾಧ್ಯವಾಗುತ್ತದೆ.



ವಿದ್ಯಾರ್ಥಿಗಳಲ್ಲಿ ಪ್ರಾಯೋಗಿಕ ಹಾಗೂ ಸಂವಾದಾತ್ಮಕ ವಿಜ್ಞಾನ ಕಲಿಕೆಯನ್ನು ಉತ್ತೇಜಿಸಲು ರಾಜ್ಯದ ವಿಜ್ಞಾನ ಕೇಂದ್ರಗಳು, ಮೊಬೈಲ್ ಪ್ಲಾನೆಟೋರಿಯಂಗಳು ಮತ್ತು ದೂರದರ್ಶಕ ಆಧಾರಿತ ಕಾರ್ಯಕ್ರಮಗಳನ್ನು ವಿಸ್ತರಿಸಲಾಗುತ್ತಿದೆ. ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಮೊಬೈಲ್ ಡಿಜಿಟಲ್ ಪ್ಲಾನೆಟೋರಿಯಂ ಕಾರ್ಯಕ್ರಮವು ಈಗಾಗಲೇ 3,282 ಶಾಲೆಗಳನ್ನು ತಲುಪಿದ್ದು, 5.46 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಇದರ ಪ್ರಯೋಜನ ಪಡೆದಿದ್ದಾರೆ.

ಇದರ ಜತೆಗೆ 'ಪ್ರೊವೈಡಿಂಗ್ ಆಕ್ಸೆಸ್ ಟು ಟೆಲಿಸ್ಕೋಪ್ಸ್' ಯೋಜನೆಯಡಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಶಾಲೆಗಳು ಮತ್ತು ಕಾಲೇಜುಗಳಿಗೆ ದೂರದರ್ಶಕಗಳನ್ನು ಒದಗಿಸಲಾಗಿದ್ದು, ವಿಜ್ಞಾನ ಶಿಕ್ಷಕರಿಗೆ ಅಗತ್ಯ ತರಬೇತಿಯನ್ನೂ ನೀಡಲಾಗಿದೆ.

ಈಗಾಗಲೇ ನಡೆಯುತ್ತಿರುವ ವಿಜ್ಞಾನ ಶಿಕ್ಷಣ ಕಾರ್ಯಕ್ರಮಗಳ ಮುಂದುವರಿದ ಭಾಗವಾಗಿ ಇಸ್ರೋ ವಿಜ್ಞಾನಿ-ವಿದ್ಯಾರ್ಥಿ ಸಂವಾದವನ್ನು ಆರಂಭಿಸುವ ಉದ್ದೇಶ ಹೊಂದಲಾಗಿದೆ. ಇಸ್ರೋ ವಿಜ್ಞಾನಿಗಳೊಂದಿಗೆ ನೇರ ಸಂವಾದದ ಮೂಲಕ ಬಾಹ್ಯಾಕಾಶ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದ ಬೆಳವಣಿಗೆಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸಲು ಸಾಧ್ಯವಾಗಲಿದೆ ಎಂದು ಸಚಿವರು ತಿಳಿಸಿದ್ದಾರೆ.

ವಿಜ್ಞಾನವನ್ನು ವಿದ್ಯಾರ್ಥಿಗಳಿಗೆ ತೋರಿಸುವುದರ ಜತೆಗೆ, ಅದನ್ನು ಅನುಭವಿಸಲು ಹಾಗೂ ಪ್ರಶ್ನಿಸಲು ಅವಕಾಶ ಕಲ್ಪಿಸುವುದು ಅಗತ್ಯ. ವಿಜ್ಞಾನಿಗಳೊಂದಿಗೆ ನೇರ ಸಂವಾದವು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವುದರೊಂದಿಗೆ ಭವಿಷ್ಯದ ವಿಜ್ಞಾನಿಗಳು, ಸಂಶೋಧಕರು ಮತ್ತು ತಂತ್ರಜ್ಞಾನ ತಜ್ಞರಾಗಿ ಬೆಳೆಯಲು ಪ್ರೇರಣೆ ನೀಡಲಿದೆ ಎಂದು ಅವರು ಹೇಳಿದ್ದಾರೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ವಿಕ್ರಮ ವಾಹಿನಿ
— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —

# ವಾಟಾಳ್ ನಾಗರಾಜ್ ವಿಶ್ವದ ಶ್ರೇಷ್ಠ ಚಳುವಳಿಗಾರ: ಸುರೇಶ್ ಎನ್. ಋಗ್ವೇದಿ

● ವಿಕ್ರಮ ವಾಹಿನಿ । ಚಾಮರಾಜನಗರ

ಕನ್ನಡ ನೆಲ, ಜಲ, ಭಾಷೆ, ಕಲೆ, ಸಾಹಿತ್ಯ ಹಾಗೂ ಚಿತ್ರರಂಗದ ರಕ್ಷಣೆಗಾಗಿ ಆರು ದಶಕಗಳಿಂದ ನಿರಂತರ ಹೋರಾಟ ನಡೆಸುತ್ತಿರುವ ವಾಟಾಳ್ ನಾಗರಾಜ್ ಅವರು ಕನ್ನಡ ಚಳುವಳಿಯ ಕಳಶಪ್ರಾಯರಾಗಿದ್ದು, ವಿಶ್ವದ ಶ್ರೇಷ್ಠ ಚಳುವಳಿಗಾರರಲ್ಲಿ ಒಬ್ಬರು ಎಂದು ಸಂಸ್ಕೃತಿ ಚಿಂತಕ ಹಾಗೂ ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತ ಸುರೇಶ್ ಎನ್. ಋಗ್ವೇದಿ ಹೇಳಿದರು.



ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ 'ಕನ್ನಡ ಚಳುವಳಿ, ವಾಟಾಳ್ ನಾಗರಾಜ್ ಅವರ ಕೊಡುಗೆ ಹಾಗೂ ಜನ್ಮದಿನಾಚರಣೆ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಾಟಾಳ್ ನಾಗರಾಜ್ ಅವರು ಭಾಷೆ, ಸಂಸ್ಕೃತಿ, ನೆಲ-ಜಲದ ವಿಚಾರದಲ್ಲಿ ಸಾವಿರಾರು ಹೋರಾಟಗಳನ್ನು ನಡೆಸಿ ಕನ್ನಡಿಗರಲ್ಲಿ ಹೋರಾಟದ ಮನೋಭಾವ ಬೆಳೆಸಿದ್ದಾರೆ. ಅವರ ಸೇವೆಯನ್ನು ಕರ್ನಾಟಕದ ಜನತೆ ಗೌರವಿಸಬೇಕು ಎಂದರು.

ತಮಿಳು ಸಂಘದ ಅಧ್ಯಕ್ಷ ಜಗದೀಶನ್ ಮಾತನಾಡಿ, ವಾಟಾಳ್ ನಾಗರಾಜ್ ಅವರು ಕನ್ನಡಕ್ಕಾಗಿ



ನಿರಂತರ ಹೋರಾಡಿದರೂ ತಮಿಳರ ವಿರುದ್ಧ ದ್ವೇಷ ಬೆಳೆಸಿಕೊಳ್ಳಲಿಲ್ಲ. ಕನ್ನಡಿಗರು ಮತ್ತು ತಮಿಳರ ಬಾಂಧವ್ಯಕ್ಕೆ ಅವರು ಶಕ್ತಿಯಾಗಿದ್ದರು ಎಂದರು.

ಜನಪದ ಗಾಯಕ ಸುರೇಶ್ ನಾಗ್ ಹರದನಹಳ್ಳಿ ಮಾತನಾಡಿ, ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಶಾಸಕರಾಗಿ ಮೂರು ಬಾರಿ ಆಯ್ಕೆಯಾಗಿದ್ದ ವಾಟಾಳ್ ನಾಗರಾಜ್ ಅವರು ಚಾಮರಾಜನಗರವನ್ನು ಜಿಲ್ಲಾ ಕೇಂದ್ರವನ್ನಾಗಿ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಕುಡಿಯುವ ನೀರು, ರಸ್ತೆ, ಕೆರೆ, ಶಾಲಾ-ಕಾಲೇಜು ಹಾಗೂ ಕ್ರೀಡಾಂಗಣಗಳ ಅಭಿವೃದ್ಧಿಗೆ ಅವರ ಕೊಡುಗೆ ಮಹತ್ವದ್ದಾಗಿದೆ ಎಂದರು.

ಕನ್ನಡ ಚಳುವಳಿ ನಾಯಕ ಶ್ರೀನಿವಾಸ್ ಗೌಡ ಮಾತನಾಡಿ, ವಾಟಾಳ್ ನಾಗರಾಜ್ ಅವರ ಹೋರಾಟ ಮತ್ತು ಅಂದಿನ ಮುಖ್ಯಮಂತ್ರಿ ಜೆ.ಎಚ್.ಪಟೇಲ್ ಅವರೊಂದಿಗಿನ ಸಂಬಂಧ ಚಾಮರಾಜನಗರ ಜಿಲ್ಲೆ ರಚನೆಗೆ ಪ್ರಮುಖ ಕಾರಣವಾಯಿತು. ಯಾವುದೇ ರಾಜಕೀಯ ಪಕ್ಷದ ಆಶ್ರಯವಿಲ್ಲದೆ ಆರು ದಶಕಗಳಿಂದ ಕನ್ನಡದ ಪರ ಹೋರಾಡುತ್ತಿರುವ ವಾಟಾಳ್ ಅವರಿಗೆ ವಾಟಾಳ್ ಅವರೇ ಸಾಟಿ ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ನಿರ್ದೇಶಕ ಶಿವಲಿಂಗಮೂರ್ತಿ ಮಾತನಾಡಿ, ಚಾಮರಾಜನಗರದಲ್ಲಿ ವಾಟಾಳ್ ನಾಗರಾಜ್ ಅವರ ಹೆಸರು ಶಾಶ್ವತವಾಗಿ ಉಳಿಯುವಂತೆ ಸರ್ಕಾರ ಸೂಕ್ತ ಗೌರವ ನೀಡಬೇಕು ಎಂದು ಒತ್ತಾಯಿಸಿದರು. ಕಾರ್ಯಕ್ರಮದಲ್ಲಿ ರವಿಚಂದ್ರ ಪ್ರಸಾದ್ ಕಹಳೆ, ಬಿ.ಕೆ.ಆರಾಧ್ಯ, ಪದ್ಮ ಪುರುಷೋತ್ತಮ್, ಕಾಗಲವಾಡಿ ರಂಗಸ್ವಾಮಿ, ವೀರಶೆಟ್ಟಿ, ಮಹೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಓಖ್ಲಾದಲ್ಲಿ ಆಕ್ಸಿಜನ್ ಸಿಲಿಂಡರ್ ಸ್ಫೋಟ

● ವಿಕ್ರಮ ವಾಹಿನಿ । ನವದೆಹಲಿ

ದೆಹಲಿಯ ಓಖ್ಲಾ ಕೈಗಾರಿಕಾ ಪ್ರದೇಶದ 'ಎಸ್‌ಎಂ ಟ್ರೇಡರ್ಸ್' ಗೋಡೌನ್‌ನಲ್ಲಿ ಬುಧವಾರ ಆಕ್ಸಿಜನ್ ಸಿಲಿಂಡರ್ ಸ್ಫೋಟಗೊಂಡು ಕಾರ್ಮಿಕನೊಬ್ಬ ಸ್ಥಳದಲ್ಲೇ ಮೃತಪಟ್ಟಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಸಿಲಿಂಡರ್‌ಗಳನ್ನು ವಾಹನದಿಂದ ಇಳಿಸುವ ವೇಳೆ ಕೈತಪ್ಪಿ ಬಿದ್ದ ಪರಿಣಾಮ ಸ್ಫೋಟ ಸಂಭವಿಸಿದೆ ಎನ್ನಲಾಗಿದೆ.

ರಾಜಸ್ಥಾನದ ಜೈಪುರ ಮೂಲದ ಮೋಹಿತ್ ಸಿಂಗ್ (35) ಮೃತಪಟ್ಟವರು. ಉಮೇಶ್, ಅರವಿಂದ್, ಮನೋಜ್ ಹಾಗೂ ಪಂಕಜ್ ಗಾಯಗೊಂಡಿದ್ದು, ಅವರನ್ನು ಏಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಓಖ್ಲಾ ಹಂತ-1ರ ಡಿ-23 ಆವರಣದಲ್ಲಿರುವ ಗೋಡೌನ್‌ಗೆ ಗಾಜಿಯಾಬಾದ್‌ನಿಂದ ಕೈಗಾರಿಕಾ ಆಕ್ಸಿಜನ್ ಸಿಲಿಂಡರ್‌ಗಳನ್ನು ತರಲಾಗಿತ್ತು. ಬೆಳಗ್ಗೆ 11.55ರ ಸುಮಾರಿಗೆ ಸಿಲಿಂಡರ್‌ಗಳನ್ನು ಇಳಿಸುತ್ತಿದ್ದಾಗ ಅವಘಡ ಸಂಭವಿಸಿದೆ. ಘಟನಾ ಸ್ಥಳಕ್ಕೆ ಮೂರು ಅಗ್ನಿಶಾಮಕ ವಾಹನಗಳು ಹಾಗೂ ರಕ್ಷಣಾ ತಂಡಗಳು ಧಾವಿಸಿ ಪರಿಸ್ಥಿತಿ ನಿಯಂತ್ರಣಕ್ಕೆ ತಂದಿವೆ. ಒಂದು ಸಿಲಿಂಡರ್ ಮಾತ್ರ ಸ್ಫೋಟಗೊಂಡಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಗೋದಾಮಿನಲ್ಲಿ ಪ್ರತಿದಿನ ಸುಮಾರು 70ರಿಂದ 80 ಸಿಲಿಂಡರ್‌ಗಳನ್ನು ನಿರ್ವಹಿಸಲಾಗುತ್ತಿತ್ತು ಎನ್ನಲಾಗಿದ್ದು, ಸ್ಟಾಕ್ ರಿಜಿಸ್ಟರ್, ಬಿಲ್‌ಗಳು ಹಾಗೂ ಪೂರೈಕೆ ದಾಖಲೆಗಳನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ. ಸಂಸ್ಥೆಯು ಅಗತ್ಯ ಪರವಾನಗಿ ಮತ್ತು ಸುರಕ್ಷತಾ ನಿಯಮಗಳನ್ನು ಪಾಲಿಸಿತ್ತೇ ಎಂಬ ಬಗ್ಗೆಯೂ ತನಿಖೆ ನಡೆಯುತ್ತಿದೆ.

ವಿಧಿವಿಜ್ಞಾನ ತಂಡ ಸ್ಥಳಕ್ಕೆ ಭೇಟಿ ನೀಡಿ ಸ್ಫೋಟದ ತಾಂತ್ರಿಕ ಕಾರಣಗಳ ಕುರಿತು ಮಾದರಿಗಳನ್ನು ಸಂಗ್ರಹಿಸಿದೆ. ಸುರಕ್ಷತಾ ಕ್ರಮಗಳ ಕೊರತೆಯೇ ಅವಘಡಕ್ಕೆ ಕಾರಣವಾಗಿದೆಯೇ ಎಂಬುದನ್ನು ತನಿಖೆಯಿಂದ ತಿಳಿಯಬೇಕಿದೆ.

# ಕೆಪಿಎಸ್‌ಸಿ ಕೇಸ್: ಇಬ್ಬರು ಜೈಲಿಗೆ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನಡೆಸಿದ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಬಂಧಿತರಾಗಿರುವ ಐಎಎಸ್ ಅಧಿಕಾರಿ ಗ್ಯಾನೇಂದ್ರ ಕುಮಾರ್ ಹಾಗೂ ಬಿಜೆಪಿ ಮುಖಂಡ, ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಬಸವರಾಜ್ ಕನ್ನಾಳೆ ಅವರನ್ನು ನ್ಯಾಯಾಲಯ 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.



ಪೊಲೀಸ್ ಕಸ್ಟಡಿ ಅವಧಿ ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ಸಿಐಡಿ ಅಧಿಕಾರಿಗಳು ಬುಧವಾರ ಇಬ್ಬರನ್ನೂ ಬೆಂಗಳೂರಿನ ಒಂದನೇ ಎಸಿಜೆಎಂ ನ್ಯಾಯಾಲಯದ ಮುಂದೆ ಹಾಜರುಪಡಿಸಿದರು. ಸದ್ಯ ಹೆಚ್ಚಿನ ಪೊಲೀಸ್ ಕಸ್ಟಡಿ ಅಗತ್ಯವಿಲ್ಲ ಎಂದು ಸಿಐಡಿ ಪರ ವಕೀಲರು ತಿಳಿಸಿದ್ದು, ಅಗತ್ಯವಿದ್ದಲ್ಲಿ ಮುಂದಿನ ಹಂತದಲ್ಲಿ ಮತ್ತೆ ಕಸ್ಟಡಿಗೆ ಪಡೆಯುವುದಾಗಿ ನ್ಯಾಯಾಲಯಕ್ಕೆ ತಿಳಿಸಿದ್ದಾರೆ. ವಿಚಾರಣೆ ಬಳಿಕ ನ್ಯಾಯಾಲಯ ಇಬ್ಬರನ್ನೂ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತು.

ಇದೇ ಪ್ರಕರಣದಲ್ಲಿ ನಾಪತ್ತೆಯಾಗಿರುವ ಕೆಪಿಎಸ್‌ಸಿ ಸದಸ್ಯೆ ಶಾಂತ ಹೊಸಮನಿ ಅವರ ಮನೆಗಳ ಮೇಲೂ ಸಿಐಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೆಂಗಳೂರಿನ ಮತ್ತಿಕೆರೆ ಹಾಗೂ ನಾಗರಬಾವಿಯಲ್ಲಿರುವ ಮನೆಗಳಲ್ಲಿ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಿ, ಪ್ರಕರಣಕ್ಕೆ ಸಂಬಂಧಿಸಿದ ಮಾಹಿತಿಯನ್ನು ಸಂಗ್ರಹಿಸಿದ್ದಾರೆ.




ಈ ಮಧ್ಯೆ ಶಾಂತ ಹೊಸಮನಿ ಅವರು ಬಂಧನದ ಭೀತಿ ಹಿನ್ನೆಲೆಯಲ್ಲಿ ನಿರೀಕ್ಷಣಾ ಜಾಮೀನು ಕೋರಿ ನ್ಯಾಯಾಲಯದ ಮೊರೆ ಹೋಗಿದ್ದಾರೆ. ಪ್ರಕರಣದ ತನಿಖೆಯನ್ನು ಮುಂದುವರಿಸಿರುವ ಸಿಐಡಿ ಅಧಿಕಾರಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಕ್ಕೆ ಸಂಬಂಧಿಸಿದ ದಾಖಲೆಗಳು ಹಾಗೂ ಇತರ ಆರೋಪಿಗಳ ಪಾತ್ರದ ಕುರಿತು ಪರಿಶೀಲನೆ ನಡೆಸುತ್ತಿದ್ದಾರೆ.

ಸಿಐಡಿ ತನಿಖೆಯಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎನ್ನಲಾದ ಅಂಶಗಳಿಗೆ ಸಂಬಂಧಿಸಿದ ದಾಖಲೆಗಳು, ಹಣಕಾಸು ವ್ಯವಹಾರಗಳು ಹಾಗೂ ಆರೋಪಿಗಳ ನಡುವಿನ ಸಂಪರ್ಕದ ಬಗ್ಗೆಯೂ ಪರಿಶೀಲನೆ ಮುಂದುವರಿದಿದೆ. ಪ್ರಕರಣದಲ್ಲಿ ಇನ್ನಷ್ಟು ಮಂದಿ ಭಾಗಿಯಾಗಿರುವ ಸಾಧ್ಯತೆ ಹಿನ್ನೆಲೆಯಲ್ಲಿ ಅಧಿಕಾರಿಗಳು ವಿವಿಧ ಮೂಲಗಳಿಂದ ಮಾಹಿತಿ ಸಂಗ್ರಹಿಸುತ್ತಿದ್ದಾರೆ.

# ಸಚಿವ ಸತೀಶ್ ಜಾರಕಿಹೊಳಿ ನಿವಾಸಗಳ ಮೇಲಿನ ಇಡಿ ದಾಳಿ ರಾಜಕೀಯ ಪ್ರೇರಿತ: ಸಚಿವ ರಘುಮೂರ್ತಿ ಆಕ್ರೋಶ

● ವಿಕ್ರಮ ವಾಹಿನಿ । ಬೆಂಗಳೂರು

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಸೇರಿದ ನಿವಾಸಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ನಡೆಸಿರುವ ದಾಳಿಯು ಸಂಪೂರ್ಣ ರಾಜಕೀಯ ಪ್ರೇರಿತವಾಗಿದ್ದು, ವಿರೋಧ ಪಕ್ಷಗಳ ಪ್ರಬಲ ನಾಯಕರ ರಾಜಕೀಯ ಶಕ್ತಿಯನ್ನು ಕುಂದಿಸಲು ಕೇಂದ್ರ ಸರ್ಕಾರವು ಇಡಿ ಮತ್ತು ಸಿಬಿಐ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಪರಿಶಿಷ್ಟ ಪಂಗಡ ಕಲ್ಯಾಣ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಟಿ. ರಘುಮೂರ್ತಿ ಅವರು ತೀವ್ರವಾಗಿ ಖಂಡಿಸಿದ್ದಾರೆ.



ವಿಧಾನಸೌಧದ ಬಳಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸತೀಶ್ ಜಾರಕಿಹೊಳಿ ಅವರ ಮನೆ ಮೇಲೆ ದಾಳಿಯಾಗಿರುವ ಬಗ್ಗೆ ಮಾಧ್ಯಮಗಳ ಮೂಲಕ ತಿಳಿದುಕೊಂಡೆ. ತಾವೂ ಕೂಡ ಜಾರಕಿಹೊಳಿ ಅವರ ಮನೆಗೆ ಭೇಟಿ ನೀಡಲು ತೆರಳಿದ್ದೆರಾದರೂ, ಅವರನ್ನು ಭೇಟಿ ಮಾಡಲು ಸಾಧ್ಯವಾಗಲಿಲ್ಲ ಎಂದು ತಿಳಿಸಿದರು.

ಸತೀಶ್ ಜಾರಕಿಹೊಳಿ ಅವರು ಸದಾ ಆಳವಾದ ಚಿಂತನೆಗಳನ್ನು ಹೊಂದಿರುವ ಗಟ್ಟಿಗರಾಗಿದ್ದು, ಇಂತಹ ಯಾವುದೇ ಒತ್ತಡಗಳಿಗೆ ಅಥವಾ ದಾಳಿಗಳಿಗೆ ಅವರು ಕುಂದುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಅವರು ಯಾವುದೇ ಒತ್ತಡಕ್ಕೂ ಕುಗ್ಗುವ ವ್ಯಕ್ತಿಯಲ್ಲ. ಪ್ರಸ್ತುತ ನಡೆದಿರುವ ಈಡಿ ದಾಳಿಯ ಸಂಪೂರ್ಣ ಮಾಹಿತಿ ಬಹಿರಂಗವಾದ ಬಳಿಕವೇ ಅದರ ಹಿಂದಿನ ಕಾರಣದ ಬಗ್ಗೆ ಸ್ಪಷ್ಟ ಚಿತ್ರಣ ದೊರೆಯಲಿದೆ ಎಂದು ಸಚಿವರು ಹೇಳಿದರು.

ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಸಚಿವರು, ವಿಪಕ್ಷಗಳ ನಾಯಕರನ್ನು ಗುರಿಯಾಗಿಸಿಕೊಂಡು ಸಮುದಾಯಗಳನ್ನು ಟಾರ್ಗೆಟ್ ಮಾಡಲಾಗುತ್ತಿದೆ.

ತನಿಖಾ ಸಂಸ್ಥೆಗಳ ದಾಳಿಗಳ ವಿಚಾರದಲ್ಲಿ ಕೇಂದ್ರದ ಬಿಜೆಪಿ ವಿರುದ್ಧ ಸಚಿವರು ವಾಗ್ದಾಳಿ ನಡೆಸಿದರು. ಬಿಜೆಪಿ ನಾಯಕರು ಬೇರೆ ಪಕ್ಷಗಳ ನಾಯಕರ ರಾಜಕೀಯ ಶಕ್ತಿಯನ್ನು ಕುಂದಿಸಲು ಪ್ರಯತ್ನಿಸುತ್ತಿದ್ದಾರೆ. ಇದಕ್ಕಾಗಿ ಈಡಿ, ಸಿಬಿಐ ಸೇರಿದಂತೆ ಕೇಂದ್ರ ತನಿಖಾ ಸಂಸ್ಥೆಗಳನ್ನು ಬಳಸಲಾಗುತ್ತಿದೆ ಎಂದು ದೂರಿದರು.

"ಸಮುದಾಯವನ್ನು ಟಾರ್ಗೆಟ್ ಮಾಡಲಾಗುತ್ತಿದೆ. ರಾಜಕೀಯ ಶಕ್ತಿ ಕುಂದಿಸುವ ಉದ್ದೇಶದಿಂದ ಟಾರ್ಗೆಟ್ ಮಾಡುತ್ತಾರೆ". ಸತೀಶ್ ಜಾರಕಿಹೊಳಿ ಅವರ ಮೇಲಿನ ಕ್ರಮದ ಹಿಂದಿನ ನಿಖರ ಕಾರಣವೇನು ಎಂಬುದು ತಮಗೆ ತಿಳಿದಿಲ್ಲವಾದರೂ, ರಾಜಕೀಯವಾಗಿ ಅವರನ್ನು ದುರ್ಬಲಗೊಳಿಸುವ ಪ್ರಯತ್ನ ನಡೆಯುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಹಿಂದೆ ಮಾಜಿ ಸಚಿವ ನಾಗೇಂದ್ರ ಅವರ ರಾಜೀನಾಮೆ ಪಡೆದ ಸಂದರ್ಭದಲ್ಲೂ ಇದೇ ರೀತಿ ವ್ಯವಸ್ಥಿತವಾಗಿ ಟಾರ್ಗೆಟ್ ಮಾಡಲಾಗಿತ್ತು. ಬೇರೆ ಪಕ್ಷದವರ ರಾಜಕೀಯ ಬಲವನ್ನು ಹತ್ತಿಕ್ಕಲು ತನಿಖಾ ಸಂಸ್ಥೆಗಳನ್ನು ಅಸ್ತ್ರವನ್ನಾಗಿ ಬಳಸಲಾಗುತ್ತಿದೆ ಎಂದು ಸಚಿವ ಟಿ. ರಘುಮೂರ್ತಿ ಅವರು ಆಕ್ರೋಶ ವ್ಯಕ್ತಪಡಿಸಿದರು.



ಬೆಂಗಳೂರು ಮಹಾನಗರದಲ್ಲಿ ಗಣೇಶೋತ್ಸವಕ್ಕಾಗಿ, ಆಂಧ್ರದ ಮದನಪಲ್ಲೇಯಿಂದ ಆಗಮಿಸುತ್ತಿರುವ ಮಂಗಳ ಮೂರ್ತಿ ಶ್ರೀ ವಿನಾಯಕನ ಸುಮಾರು 14 ಅಡಿ ಎತ್ತರದ ಭವ್ಯ ಹಾಗೂ ಆಕರ್ಷಕ ಮೂರ್ತಿಯು ಹೆಚ್. ಬಿ. ಆರ್. ರಿಂಗ್ ರಸ್ತೆಯ ಮೂಲಕ ಬುಧವಾರ ಸಂಜೆ ಬಿಸಿಲ ಹೊತ್ತಿನಲ್ಲಿ ನಗರವನ್ನು ಪ್ರವೇಶಿಸಿ ತನ್ನ ಗಮ್ಯವನ್ನು ತಲಪುವ ಉತ್ಸಾಹದಿ ಸಾಗುತ್ತಿರುವ ದೃಶ್ಯ.

# ಕರ್ನಾಟಕದ ಎರಡು ರೈಲ್ವೆ ಯೋಜನೆಗಳಿಗೆ ಕೇಂದ್ರ ಅಸ್ತು

● ವಿಕ್ರಮ ವಾಹಿನಿ । ನವದೆಹಲಿ

ಕರ್ನಾಟಕದ ರೈಲು ಮೂಲಸೌಕರ್ಯ ಹಾಗೂ ಸಂಚಾರ ಸಾಮರ್ಥ್ಯ ಹೆಚ್ಚಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮಹತ್ವದ ಎರಡು ರೈಲ್ವೆ ಯೋಜನೆಗಳಿಗೆ ಅನುಮೋದನೆ ನೀಡಿದೆ. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ ಸಭೆಯಲ್ಲಿ ಒಟ್ಟು 10,021 ಕೋಟಿ ವೆಚ್ಚದ ಐದು ಬಹುಹಳಿ ರೈಲ್ವೆ ಯೋಜನೆಗಳಿಗೆ ಹಸಿರು ನಿಶಾನೆ ದೊರೆತಿದೆ.

ಕರ್ನಾಟಕಕ್ಕೆ ಸಂಬಂಧಿಸಿದಂತೆ ವೈಟ್‌ಫೀಲ್ಡ್-ಬಂಗಾರಪೇಟೆ ನಡುವೆ 47 ಕಿ.ಮೀ. ಉದ್ದದ 3ನೇ ಮತ್ತು 4ನೇ ರೈಲು ಮಾರ್ಗ ಹಾಗೂ ಹೊಸೂರು-ಒಮಲೂರು ನಡುವೆ ಡಬ್ಲಿಂಗ್ ಯೋಜನೆ ಕೈಗೆತ್ತಿಕೊಳ್ಳಲಾಗುವುದು. ಈ ಯೋಜನೆಗಳಿಂದ ಬೆಂಗಳೂರು-ಚೆನ್ನೈ ರೈಲು ಕಾರಿಡಾರ್‌ನಲ್ಲಿ ಸಂಚಾರ ಸಾಮರ್ಥ್ಯ ಹೆಚ್ಚಲಿದ್ದು, ಪ್ರಯಾಣಿಕ ಮತ್ತು ಸರಕು ರೈಲುಗಳ ಸಂಚಾರ ಮತ್ತಷ್ಟು ಸುಗಮವಾಗಲಿದೆ.

ಕರ್ನಾಟಕದ ಎರಡು ಯೋಜನೆಗಳ ಜತೆಗೆ ಅರಕ್ಕೋಣಂ-ರೇಣಿಗುಂಟಾ 3ನೇ ಮತ್ತು 4ನೇ ಮಾರ್ಗ (77 ಕಿ.ಮೀ.), ಸೇಲಂ-ಕರೂರು-ದಿಂಡಿಗಲ್ ಡಬ್ಲಿಂಗ್ (159 ಕಿ.ಮೀ.) ಹಾಗೂ ಸಿಕಂದರಾಬಾದ್ (ಘಟ್‌ಕೇಸರ್)-ಕಾಜಿಪೇಟೆ ಬಹುಹಳಿ ಯೋಜನೆ (110 ಕಿ.ಮೀ.)ಗೂ ಅನುಮೋದನೆ ನೀಡಲಾಗಿದೆ. ಐದು ಯೋಜನೆಗಳನ್ನು 2029-30ರ ವೇಳೆಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

ನಾಲ್ಕು ರಾಜ್ಯಗಳಲ್ಲಿ ಅನುಷ್ಠಾನಗೊಳ್ಳಲಿರುವ ಈ ಯೋಜನೆಗಳಿಂದ 2,121 ಗ್ರಾಮಗಳ ರೈಲು ಸಂಪರ್ಕ ಸುಧಾರಿಸಲಿದ್ದು, ಸುಮಾರು 52 ಲಕ್ಷ ಜನರಿಗೆ ಪ್ರಯೋಜನವಾಗಲಿದೆ. ತಿರುಪತಿ, ತಿರುಟ್ಟಣಿ, ತಿರುಚಾನೂರು, ಬಂಗಾರು ತಿರುಪತಿ, ಕೆಜಿಎಫ್, ಹೊಗೇನಕಲ್ ಜಲಪಾತ, ಹೊಸೂರು ಕೋಟೆ, ಮೆಟ್ಟೂರು ಅಣೆಕಟ್ಟು ಹಾಗೂ ಕೊಡೈಕೆನಾಲ್ ಸೇರಿದಂತೆ ಪ್ರಮುಖ ಪ್ರವಾಸಿ ಮತ್ತು ಧಾರ್ಮಿಕ ತಾಣಗಳ ಸಂಪರ್ಕವೂ ಮತ್ತಷ್ಟು ಬಲಗೊಳ್ಳಲಿದೆ.

# ವಿಧಾನಸೌಧ, ಮೈಸೂರು ಅರಮನೆ ಸೇರಿ ಪಾರಂಪರಿಕ ಕಟ್ಟಡಗಳಿಗೆ ವಿದ್ಯುತ್ ದೀಪಾಲಂಕಾರ

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರಕ್ಕೆ ಸೆ.10ರಂದು 100 ದಿನಗಳು ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದ ಪ್ರಮುಖ ಪಾರಂಪರಿಕ ಕಟ್ಟಡಗಳು ನಾಲ್ಕು ದಿನಗಳ ಕಾಲ ವರ್ಣರಂಜಿತ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸಲಿವೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಸೆ.10ರಿಂದ ನಾಲ್ಕು ದಿನಗಳ ಕಾಲ ವಿಧಾನಸೌಧ, ಮೈಸೂರು ಅರಮನೆ, ಕೃಷ್ಣರಾಜಸಾಗರ ಅಣೆಕಟ್ಟು, ತುಂಗಭದ್ರಾ ಹಾಗೂ ಆಲಮಟ್ಟಿ ಜಲಾಶಯ ಸೇರಿದಂತೆ ರಾಜ್ಯದ 11 ಪ್ರಮುಖ ಸ್ಥಳಗಳಲ್ಲಿ ವಿಶೇಷ ದೀಪಾಲಂಕಾರ ವ್ಯವಸ್ಥೆ ಮಾಡಲಾಗುತ್ತಿದೆ.

ಬೆಂಗಳೂರಿನ ಪುರಭವನ, ಕೆ.ಆರ್.ಪುರಂ ತೂಗುಸೇತುವೆ, ಹಂಪಿಯ ವಿರೂಪಾಕ್ಷೇಶ್ವರ ದೇವಾಲಯದ ಬಿಷ್ಟಪ್ಪಯ್ಯನ ಗೋಪುರ, ಕಲಬುರಗಿಯ ಜಿಲ್ಲಾಧಿಕಾರಿ ಕಚೇರಿ ಹಾಗೂ ಜಗತ್ ವೃತ್ತ ಸೇರಿದಂತೆ ಹಲವು ಸ್ಥಳಗಳು ವಿದ್ಯುತ್ ದೀಪಗಳಿಂದ ಝಗಮಗಿಸಲಿವೆ.

ಆಯ್ದ ಕಟ್ಟಡಗಳಲ್ಲಿ ಸರ್ಕಾರದ ಅಭಿವೃದ್ಧಿ ಯೋಜನೆಗಳು ಹಾಗೂ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಎಲ್‌ಇಡಿ ಪ್ರದರ್ಶನ, ಧ್ವನಿ-ಬೆಳಕು ಮತ್ತು ತ್ರಿಡಿ ಮ್ಯಾಪಿಂಗ್ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ವಿವಿಧ ಜಿಲ್ಲೆಗಳಲ್ಲಿಯೂ ಜಿಲ್ಲಾಡಳಿತದ ವತಿಯಿಂದ ದೀಪಾಲಂಕಾರ ಕೈಗೊಳ್ಳಲಾಗುತ್ತಿದೆ.

## 100 ದಿನಗಳಲ್ಲಿ ಹಲವು ಕ್ರಮ

ಸರ್ಕಾರದ 100 ದಿನಗಳ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್, ಸಾರ್ವಜನಿಕರ ಕುಂದುಕೊರತೆ ಮತ್ತು ಅಹವಾಲುಗಳ ಪರಿಹಾರಕ್ಕೆ 'ಪ್ರಜಾಸೇವಾ' ಇಲಾಖೆ ಸ್ಥಾಪನೆ, ಗ್ಯಾರಂಟಿ ಯೋಜನೆಗಳಲ್ಲಿನ ಸೋರಿಕೆ ತಡೆಗೆ ಕ್ರಮ, ರೌಡಿ ಚಟುವಟಿಕೆಗಳ ನಿಯಂತ್ರಣಕ್ಕೆ ಜಿಲ್ಲೆಗೊಂದು ಪಡೆ ರಚನೆ ಸೇರಿದಂತೆ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ವಾರ್ತಾ ಇಲಾಖೆ ತಿಳಿಸಿದೆ.

ಬರ ಪರಿಸ್ಥಿತಿ ನಿರ್ವಹಣೆ, ಕರಾವಳಿ ಪ್ರವಾಸೋದ್ಯಮ ಉತ್ತೇಜನ, ಹೊಸಪೇಟೆ ಸಮೀಪದ ತುಂಗಭದ್ರಾ ಜಲಾಶಯಕ್ಕೆ ಹೊಸ ಸ್ಪಿಲ್‌ವೇ ಗೇಟ್‌ಗಳ ಉದ್ಘಾಟನೆ, 'ಬಿಯಾಂಡ್ ಬೆಂಗಳೂರು' ಪರಿಕಲ್ಪನೆಯಡಿ ಕೈಗಾರಿಕೆಗಳಿಗೆ ಉತ್ತೇಜನ ಹಾಗೂ 72 ಸಾವಿರ ಸರ್ಕಾರಿ ಹುದ್ದೆಗಳ ನೇಮಕಾತಿಗೆ ಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆ.

ಮುಂಬರುವ ದಿನಗಳಲ್ಲಿ 'ದೃಢ ಕರ್ನಾಟಕ' ಸಂಕಲ್ಪದಡಿ ಮತ್ತಷ್ಟು ಮಹತ್ವದ ಹೆಜ್ಜೆಗಳನ್ನು ಇಡಲು ಸರ್ಕಾರ ಚಿಂತಿಸಿದೆ ಎಂದು ವಾರ್ತಾ ಇಲಾಖೆ ಆಯುಕ್ತ ಎಂ.ಎಸ್. ಅನುಚೇತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಯಲುಸೀಮೆಯ ಕನಸು ನನಸು: ಚಿತ್ರದುರ್ಗಕ್ಕೆ ಭದ್ರಾ ನೀರು



● ವಿಕ್ರಮ ವಾಹಿನಿ । ಚಿತ್ರದುರ್ಗ

ಬಯಲುಸೀಮೆಯ ಜನರ ಬಹುದಿನಗಳ ಕನಸಾಗಿದ್ದ ಭದ್ರಾ ನೀರು ಕೊನೆಗೂ ಚಿತ್ರದುರ್ಗ ಜಿಲ್ಲೆ ಪ್ರವೇಶಿಸಿದ್ದು, ಜಿಲ್ಲೆಯ ಜನರಲ್ಲಿ ಸಂಭ್ರಮ ಮನೆಮಾಡಿದೆ.

ಹೊಸದುರ್ಗ ತಾಲೂಕಿನ ಸಾಣೇಹಳ್ಳಿ ಬಳಿ ಭದ್ರಾ ನೀರನ್ನು ಜನರು ಸಂಭ್ರಮದಿಂದ ಸ್ವಾಗತಿಸಿದರು. ತರಳಬಾಳು ಶಾಖಾ ಮಠದ ಪಂಡಿತಾರಾಧ್ಯ ಸ್ವಾಮೀಜಿ ನೇತೃತ್ವದಲ್ಲಿ ಬಾಗಿನ ಅರ್ಪಿಸಿ ಭದ್ರಾ ನೀರಿಗೆ ಸಾಂಪ್ರದಾಯಿಕವಾಗಿ ಸ್ವಾಗತ ಕೋರಲಾಯಿತು. ಭದ್ರಾ ನೀರು ಜಿಲ್ಲೆ ಪ್ರವೇಶಿಸಿರುವುದು ಬರಪೀಡಿತ ಬಯಲುಸೀಮೆಯ ರೈತರಲ್ಲಿ ಹೊಸ ನಿರೀಕ್ಷೆ ಮೂಡಿಸಿದೆ. ನೀರಿನ ಲಭ್ಯತೆಯಿಂದ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ದೊರೆಯುವ ವಿಶ್ವಾಸವನ್ನು ಜನರು ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಪಂಡಿತಾರಾಧ್ಯ ಸ್ವಾಮೀಜಿ, ಬಯಲುಸೀಮೆಗೆ ಭದ್ರಾ ನೀರು ಹರಿದುಬಂದಿರುವುದು ಸಂತಸದ ವಿಚಾರವಾಗಿದ್ದು, ಈ ನೀರಿನ ಸದ್ಬಳಕೆಯಾಗಬೇಕು ಎಂದು ಆಶಿಸಿದರು. ಬಾಗಿನ ಅರ್ಪಣೆ ವೇಳೆ ಸ್ವಾಮೀಜಿ ವ್ಯಂಗ್ಯವಾಗಿ ಮಾತನಾಡುವ ಸಂದರ್ಭದಲ್ಲಿ ಯಡವಟ್ಟು ಮಾಡಿಕೊಂಡಿರುವುದು ಕೂಡ ಗಮನ ಸೆಳೆಯಿತು. ಈ ಘಟನೆ ಸ್ಥಳದಲ್ಲಿದ್ದವರ ನಡುವೆ ಚರ್ಚೆಗೆ ಕಾರಣವಾಯಿತು.

# 'ಬರ ನಿರ್ವಹಣೆ ಕೈಪಿಡಿ ಬದಲಾವಣೆಗೆ ಕೇಂದ್ರಕ್ಕೆ ಪತ್ರ'

● ವಿಕ್ರಮ ವಾಹಿನಿ । ಬೆಂಗಳೂರು

ಬರಪೀಡಿತ ಪ್ರದೇಶ ಘೋಷಣೆಗೆ ಕೇಂದ್ರ ಸರ್ಕಾರ ರೂಪಿಸಿರುವ ಬರ ನಿರ್ವಹಣೆ ಕೈಪಿಡಿಯ ನಿಯಮಾವಳಿಗಳು ಅಸಮರ್ಪಕವಾಗಿದ್ದು, ಅವುಗಳನ್ನು ಬದಲಾಯಿಸುವಂತೆ ಕೇಂದ್ರಕ್ಕೆ ಪತ್ರ ಬರೆಯಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಸಲಹೆ ನೀಡಿದರು.



2026ರ ಮುಂಗಾರು ಹಾಗೂ ಬರ ಪರಿಸ್ಥಿತಿ ಸೇರಿದಂತೆ ನೈಸರ್ಗಿಕ ವಿಕೋಪಗಳ ಕುರಿತು ಕಂದಾಯ ಸಚಿವ ಡಾ.ಜಿ. ಪರಮೇಶ್ವರ್ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟದ ಉಪ ಸಮಿತಿ ಸಭೆಯಲ್ಲಿ ಅವರು ಈ ಸಲಹೆ ನೀಡಿದರು. ಈ ಕುರಿತು ರಾಜ್ಯ ಸರ್ಕಾರ ಹಲವು ಬಾರಿ ಕೇಂದ್ರಕ್ಕೆ ಮನವಿ ಸಲ್ಲಿಸಿದ್ದರೂ ಯಾವುದೇ ಬದಲಾವಣೆ ಮಾಡಿಲ್ಲ. ಹೀಗಾಗಿ ನಿಯಮಾವಳಿಗಳಲ್ಲಿನ ಅಂಶಗಳನ್ನು ಪ್ರತ್ಯೇಕವಾಗಿ ಉಲ್ಲೇಖಿಸಿ ಮತ್ತೊಮ್ಮೆ ಒತ್ತಾಯಿಸಬೇಕು ಎಂದರು.

ಕೇಂದ್ರದ ಮಾರ್ಗಸೂಚಿಗಳ ಪ್ರಕಾರ ಬರ ಘೋಷಣೆಗೆ ಮಳೆ ಕೊರತೆಯ ಜತೆಗೆ ಉಪಗ್ರಹ ಆಧಾರಿತ ಸೂಚ್ಯಂಕಗಳನ್ನೂ ಪರಿಗಣಿಸಬೇಕಿದೆ. ಅಲ್ಪ ಮಳೆಯಾಗಿ ಬೆಳೆ ಹಾನಿಯಾದರೂ ಬಿತ್ತನೆ ಪ್ರಮಾಣದ ಮಾನದಂಡದಿಂದ ಬರ ಘೋಷಣೆಗೆ ತೊಂದರೆಯಾಗುತ್ತಿದೆ. ಇದು ರೈತರ ಹಿತದೃಷ್ಟಿಯಿಂದ ಸೂಕ್ತವಲ್ಲ ಎಂದು ಖಂಡ್ರೆ ಹೇಳಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿಯ ವೈಜ್ಞಾನಿಕ ಮೌಲ್ಯಮಾಪನಕ್ಕೆ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆಎಸ್‌ಎನ್‌ಡಿಎಂಸಿ) ಹಾಗೂ ಕಂದಾಯ ಇಲಾಖೆಯ ವಿಪತ್ತು ನಿರ್ವಹಣಾ ಕೋಶದ ವರದಿಗಳನ್ನು ಆಧರಿಸಲಾಗುತ್ತದೆ. ವಾಡಿಕೆಗಿಂತ ಶೇ.60ರಷ್ಟು ಮಳೆ ಕೊರತೆ, ಶೇ.50ಕ್ಕಿಂತ ಹೆಚ್ಚು ಬಿತ್ತನೆ ಕೊರತೆ ಹಾಗೂ ಸತತ ಮೂರು ವಾರಗಳ ಶುಷ್ಕ ವಾತಾವರಣದಂತಹ ಮಾನದಂಡಗಳನ್ನು ಆಧರಿಸಿ ಬರಪೀಡಿತ ತಾಲೂಕು ಘೋಷಿಸಲಾಗುತ್ತದೆ.

ತುಂತುರು ಮಳೆಯಾಗಿ ಅಲ್ಪ ಪ್ರಮಾಣದ ತೇವಾಂಶ ಉಳಿದಿದ್ದರೂ ಪ್ರಸ್ತುತ ನಿಯಮಾವಳಿಗಳಿಂದ ಬರ ಘೋಷಣೆಗೆ ಅಡ್ಡಿಯಾಗುತ್ತದೆ. ಹೀಗಾಗಿ ವಾಸ್ತವ ಪರಿಸ್ಥಿತಿಗೆ ಅನುಗುಣವಾಗಿ ನಿಯಮಾವಳಿಗಳನ್ನು ಪರಿಷ್ಕರಿಸುವ ಅಗತ್ಯವಿದೆ ಎಂದು ಖಂಡ್ರೆ ಒತ್ತಾಯಿಸಿದರು.

ಬರ ಘೋಷಣೆಯಲ್ಲಿನ ಕಠಿಣ ಮಾನದಂಡಗಳಿಂದಾಗಿ ಮಳೆ ಕೊರತೆ ಹಾಗೂ ಬೆಳೆ ಹಾನಿಯಿಂದ ಸಂಕಷ್ಟಕ್ಕೀಡಾದ ರೈತರಿಗೆ ಅಗತ್ಯ ಪರಿಹಾರ ಮತ್ತು ಸರ್ಕಾರಿ ಸೌಲಭ್ಯಗಳು ವಿಳಂಬವಾಗುವ ಸಾಧ್ಯತೆಯಿದೆ.

ಕೇಂದ್ರದ ಮಾರ್ಗಸೂಚಿಗಳ ಪರಿಷ್ಕರಣೆಯಿಂದ ರಾಜ್ಯಗಳಲ್ಲಿ ವಾಸ್ತವ ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ಗುರುತಿಸಲು ಸಾಧ್ಯವಾಗಲಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ಬೇಡಿಕೆಗಳು ಹಾಗೂ ಎದುರಾಗುತ್ತಿರುವ ಪ್ರಾಯೋಗಿಕ ಸಮಸ್ಯೆಗಳನ್ನು ಕೇಂದ್ರ ಸರ್ಕಾರದ ಗಮನಕ್ಕೆ ತಂದು, ರೈತರಿಗೆ ತ್ವರಿತವಾಗಿ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಭೆಯಲ್ಲಿ ಒತ್ತಾಯಿಸಲಾಯಿತು.

ಸಭೆಯಲ್ಲಿ ಸಚಿವರಾದ ಲಕ್ಷ್ಮಣ ಸವದಿ, ಪುಟ್ಟರಂಗಶೆಟ್ಟಿ ಸೇರಿದಂತೆ ಇತರರು ಭಾಗವಹಿಸಿದ್ದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 160,